ಸಂಪುಟ : 11 ಸಂಚಿಕೆ: 127 ಪುಟ : 4+2 ಬೆಲೆ: 3.00 ಶನಿವಾರ ಜೂನ್ 20 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 127 Pages : 4+2 Price : 3.00 Saturday june 20 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ನಾಳೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಗದಗ-ಬೆಟಗೇರಿ ನಗರಸಭೆಯ ಸಂಯುಕ್ತ ಆಶ್ರಯದಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21ರಂದು ಬೆಳಿಗ್ಗೆ 6.30 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದಡಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ನೂರಾರು ಯೋಗಾಸಕ್ತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದು, ಸಾಮೂಹಿಕ ಯೋಗಾಭ್ಯಾಸ ನಡೆಸಲಾಗುತ್ತದೆ.

ಕಾರ್ಯಕ್ರಮಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸಲಿದ್ದು, ಮಾಜಿ ಸಚಿವರು ಹಾಗೂ ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಉದ್ಘಾಟನೆ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ ಶೆಟ್ಟರ ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಯೋಜನೆ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್, ಆಯುಷ್ ಇಲಾಖೆಯ ಆಯುಕ್ತ ಡಾ. ಸುನೀಲ್ ಪನ್ವಾರ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಹಾಗೂ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜುಬೇದಾ ತಿಗಳೇರ ಭಾಗವಹಿಸಲಿದ್ದಾರೆ.

ಯೋಗದ ಮಹತ್ವದ ಕುರಿತು ಅರಿವು ಮೂಡಿಸುವ ಹಾಗೂ ಆರೋಗ್ಯಕರ ಜೀವನಶೈಲಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆಯೋಜಿಸಲಾಗಿರುವ ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ.

## ಇಂದು ಹಲವು ಬಡಾವಣೆಗಳಲ್ಲಿ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರಸ್ತೆ ಗದಗ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 20ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸಂಭಾಪೂರ ರಸ್ತೆ ಉಪ ವಿದ್ಯುತ್ ವಿತರಣಾ ಕೇಂದ್ರದಿಂದ ವಿತರಣೆಯಾಗುವ 110 ಕೆವ್ಹಿ ರೈಲ್ವೆ ಮಾರ್ಗ ಹಾಗೂ 11 ಕೆವ್ಹಿ ಫೀಡರ್ ವ್ಯಾಪ್ತಿಯ ಗ್ರಾಹಕರಿಗೆ ಈ ಅವಧಿಯಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

▸▸3ನೇ ಪುಟಕ್ಕೆ

### ಪ್ರತಿ ಮನೆಗೆ ಮೂರು ಬಾರಿ ಭೇಟಿ ನೀಡಲಿರುವ ಬಿಎಲ್‌ಒಗಳು-ಎಸ್‌ಐಆರ್ ಕಾರ್ಯ ಯಶಸ್ವಿಗೆ ಜಿಲ್ಲಾಡಳಿತದ ಸಮಗ್ರ ಸಿದ್ಧತೆ

# ಮತದಾರರ ಪಟ್ಟಿಯಲ್ಲಿ ತಪ್ಪುಗಳಿಗೆ ಅವಕಾಶವಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಅತ್ಯಂತ ಪಾರದರ್ಶಕ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ಮತದಾರರ ಹೆಸರು ಕೈಬಿಡದಂತೆ ಎಚ್ಚರಿಕೆ ವಹಿಸುವ ಜೊತೆಗೆ ಚುನಾವಣಾ ಜಾಗೃತಿಯನ್ನು ತಳಮಟ್ಟಕ್ಕೆ ತಲುಪಿಸುವ ಕಾರ್ಯಕ್ಕೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಮತದಾರರ ಜಾಗೃತಿ ಮೂಡಿಸಲು ಶಾಲೆ, ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇಎಲ್‌ಸಿ ಕ್ಲಬ್‌ಗಳ ಮೂಲಕ ಜೂನ್ 30ರೊಳಗೆ ಕಡ್ಡಾಯವಾಗಿ ಚುನಾವಣಾ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ವಿದ್ಯಾರ್ಥಿಗಳಲ್ಲಿ ಮತದಾನದ ಮಹತ್ವ ಅರಿವು ಮೂಡಿಸಲು 'ಕ್ಯಾಂಪಸ್ ಅಂಬಾಸಿಡರ್'ಗಳನ್ನು ನೇಮಕ ಮಾಡಿ ವಿವಿಧ ಚಟುವಟಿಕೆಗಳನ್ನು ಆಯೋಜಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳ ವ್ಯಾಪ್ತಿಯಲ್ಲಿ 'ವೋಟರ್ಸ್ ಅವೇರ್ನೆಸ್ ಫೋರಂ' ಸ್ಥಾಪಿಸಿ, ಸ್ವೀಪ್ (ಖಗಿಇಇಕ) ಹಾಗೂ ಎಸ್‌ಐಆರ್‌ಗೆ ಸಂಬಂಧಿಸಿದ ಜಾಗೃತಿ ಕಾರ್ಯಕ್ರಮಗಳನ್ನು ವ್ಯಾಪಕವಾಗಿ ನಡೆಸಬೇಕು. ಎಲ್ಲಾ ಇಲಾಖೆಗಳು ಸೋಮವಾರದೊಳಗೆ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಪ್ರತಿ ಬೂತ್‌ನಲ್ಲಿ ಚುನಾವಣಾ ಪಾಠಶಾಲೆ

ಮತದಾರರಲ್ಲಿ ಚುನಾವಣಾ ಸಾಕ್ಷರತೆ ಹೆಚ್ಚಿಸುವ ಉದ್ದೇಶದಿಂದ ಪ್ರತಿ ಬೂತ್ ಮಟ್ಟದಲ್ಲಿ 'ಚುನಾವಣಾ ಪಾಠಶಾಲೆ' ರಚಿಸಲಾಗುವುದು. ಬಿಎಲ್‌ಒಗಳು ಇದರ ನೋಡಲ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದು, ಸ್ಥಳೀಯ ಯುವಕರು, ರೈತರು, ಮಹಿಳೆಯರು ಹಾಗೂ ವಿವಿಧ ಸಮುದಾಯದ ಸದಸ್ಯರನ್ನು ಒಳಗೊಂಡು ಜಾಗೃತಿ ಮೂಡಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಮತದಾರರ ಪಟ್ಟಿಯ ನೈಜತೆ ಕಾಪಾಡುವ ಉದ್ದೇಶದಿಂದ ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು. ಪ್ರತಿ ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ ವಿವರ ಪರಿಶೀಲಿಸಬೇಕು. ಪರಿಶೀಲನೆ ಪೂರ್ಣಗೊಂಡ ಮನೆಗಳಿಗೆ ಚುನಾವಣಾ ಆಯೋಗದ ವಿಶೇಷ ಸ್ಟಿಕ್ಕರ್ ಅಂಟಿಸಲಾಗುವುದು. ಮೃತಪಟ್ಟವರು ಅಥವಾ ಸ್ಥಳಾಂತರಗೊಂಡವರ ಹೆಸರನ್ನು ನಿಯಮಾನುಸಾರ ಕೈಬಿಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯ ವೇಳಾಪಟ್ಟಿಯನ್ನೂ ವಿವರಿಸಲಾಯಿತು. ಜೂನ್ 20ರಿಂದ 29ರವರೆಗೆ ಪೂರ್ವಸಿದ್ಧತೆ ಮತ್ತು ತರಬೇತಿ ನಡೆಯಲಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳ ಮೂಲಕ ಮನೆ-ಮನೆ ಸಮೀಕ್ಷೆ ನಡೆಸಲಾಗುವುದು. ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದು, ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ತಿಳಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಜಿಲ್ಲೆಯಲ್ಲಿ 536 ಇಎಲ್‌ಸಿ ಕ್ಲಬ್‌ಗಳಿದ್ದು, ಅವುಗಳಲ್ಲಿ 402 ಕ್ಲಬ್‌ಗಳು ಸಕ್ರಿಯವಾಗಿವೆ. ಉಳಿದ ಕ್ಲಬ್‌ಗಳನ್ನು ಶೀಘ್ರದಲ್ಲೇ ಸಕ್ರಿಯಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಗೆ ಸಂಬಂಧಿಸಿದ ದೂರುಗಳು ಅಥವಾ ಮಾಹಿತಿಗಾಗಿ ಸಾರ್ವಜನಿಕರು ಚುನಾವಣಾ ಸಹಾಯವಾಣಿ 1950ಕ್ಕೆ ಕರೆ ಮಾಡಬಹುದು ಎಂದು ತಿಳಿಸಲಾಯಿತು.



> "ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಪಾರದರ್ಶಕತೆ ಮತ್ತು ನಿಖರತೆಗೆ ಮೊದಲ ಆದ್ಯತೆ ನೀಡಬೇಕು. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಬಿಟ್ಟುಹೋಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ

### ಜಲಾಗಾರ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಭೇಟಿ- ದಾಖಲೆಗಳಿದ್ದರೆ ಕೊಡಿ ಪರಿಶೀಲಿಸುತ್ತೇನೆ ಎಂದ ಡಿಸಿ ಶ್ರೀಧರ್

# ಕುಡಿಯುವ ನೀರಿನ ಯೋಜನೆಗೆ ಅಡ್ಡಿ ಬೇಡ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಕಾಲೇಜು ಆವರಣದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಕೆ.ಯು.ಡಬ್ಲ್ಯೂ.ಎಸ್.) ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಜಲಾಗಾರ ಕಾಮಗಾರಿ ಸ್ಥಳಾಂತರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆದಿದ್ದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಶುಕ್ರವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಒಕ್ಕೂಟದ ಪ್ರತಿಭಟನೆಯಿಂದ ಸ್ಥಗಿತಗೊಂಡಿದ್ದ ಕಾಮಗಾರಿ ಸ್ಥಳದಲ್ಲಿ ಅಧಿಕಾರಿಗಳು, ಇಂಜಿನಿಯರ್‌ಗಳು ಹಾಗೂ ಗುತ್ತಿಗೆದಾರರಿಂದ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಕಾಮಗಾರಿ ಸಂಬಂಧ ಸಮಗ್ರ ಮಾಹಿತಿ ಸಂಗ್ರಹಿಸಿದರು.

ಈ ವೇಳೆ ಪ್ರತಿಭಟನಾಕಾರರು, ಕುಡಿಯುವ ನೀರಿನ ಯೋಜನೆಗೆ ತಮ್ಮ ವಿರೋಧವಿಲ್ಲ. ಆದರೆ ಭವಿಷ್ಯದಲ್ಲಿ ಕಾಲೇಜು ಸರ್ಕಾರಕ್ಕೆ ಹಸ್ತಾಂತರವಾಗಲಿದ್ದು, ಕಟ್ಟಡ ವಿಸ್ತರಣೆ ಹಾಗೂ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗುವ ಸಾಧ್ಯತೆ ಇರುವುದರಿಂದ ಕಾಮಗಾರಿಯನ್ನು ಬೇರೆಡೆ ಸ್ಥಳಾಂತರಿಸಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ಜಲಾಗಾರ ನಿರ್ಮಾಣದಿಂದ ಯಾವುದೇ ರೀತಿಯ ತೊಂದರೆಯಾಗುವುದಿಲ್ಲ. ಇದು ಪುರಸಭೆಯ ಆಸ್ತಿಯಾಗಿದ್ದು, ಕುಡಿಯುವ ನೀರು ಜನರ ಮೂಲಭೂತ ಅಗತ್ಯವಾಗಿದೆ. ಜನರ ಅನುಕೂಲಕ್ಕಾಗಿ ಸರ್ಕಾರ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಕೈಗೊಂಡಿರುವ ಯೋಜನೆಗೆ ಅನಗತ್ಯ ಅಡ್ಡಿಪಡಿಸುವುದು ಸರಿಯಲ್ಲ ಎಂದು ಹೇಳಿದರು.

ಕಾಮಗಾರಿಗೆ ವಿರೋಧ ವ್ಯಕ್ತಪಡಿಸಲು ಸೂಕ್ತ ದಾಖಲೆಗಳು ಅಥವಾ ಕಾನೂನು ಆಧಾರಗಳಿದ್ದರೆ ಸಲ್ಲಿಸಿ, ಅವುಗಳನ್ನು ಪರಿಶೀಲಿಸಲಾಗುವುದು. ಆದರೆ ಯಾವುದೇ ಕಾರಣಕ್ಕೂ ಯೋಜನೆ ವಿಳಂಬವಾಗಬಾರದು ಎಂದು ಸ್ಪಷ್ಟಪಡಿಸಿದರು.

ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಪೈಪ್‌ಲೈನ್ ಅಳವಡಿಕೆ, ಪಂಪ್‌ಸೆಟ್ ಅಳವಡಿಕೆ ಸೇರಿದಂತೆ ಬಾಕಿ ಉಳಿದಿರುವ ಎಲ್ಲ ಕಾಮಗಾರಿಗಳನ್ನು ಶೀಘ್ರ ಮುಗಿಸಬೇಕು. ನಿರ್ಮಾಣ ಸಾಮಗ್ರಿಗಳನ್ನು ಕಾಲೇಜು ಆವರಣದ ಹೊರಭಾಗದಲ್ಲಿ ಸಂಗ್ರಹಿಸಬೇಕು ಎಂದು ನಿರ್ದೇಶನ ನೀಡಿದರು.

ಪಟ್ಟಣದ ಕುಡಿಯುವ ನೀರಿನ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ ಮಾಹಿತಿ ಲಭಿಸಿದ್ದು, ಕಾಮಗಾರಿ ವಿಳಂಬಕ್ಕೆ ಅವಕಾಶ ನೀಡಬಾರದು. ಕೆ.ಯು.ಡಬ್ಲ್ಯೂ.ಎಸ್. ಹಾಗೂ ಪುರಸಭೆ ಅಧಿಕಾರಿಗಳು ನಿರಂತರ ನಿಗಾವಹಿಸಬೇಕು. ತಾವೂ ಸಹ ಕಾಲಕಾಲಕ್ಕೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವುದಾಗಿ ತಿಳಿಸಿದರು.

ಇದೇ ವೇಳೆ ಒಳಚರಂಡಿ ಕಾಮಗಾರಿಯಿಂದ ಹದಗೆಟ್ಟಿರುವ ರಸ್ತೆಗಳ ದುರಸ್ತಿ ಹಾಗೂ ಕಾಲೇಜು ಕಟ್ಟಡದ ಅಭಿವೃದ್ಧಿಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನೆ ವೇಳೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ, ಕೆ.ಯು.ಡಬ್ಲ್ಯೂ.ಎಸ್. ಇಂಜಿನಿಯರ್ ಜೆ.ಬಿ. ಹೊಸಮನಿ, ಪುರಸಭೆ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಇಂಜಿನಿಯರ್ ಈರಣ್ಣ ದುರಗಣ್ಣವರ, ಪ್ರಭಾರಿ ಪ್ರಾಚಾರ್ಯ ವಾಗೀಶ ನಾಗಶೆಟ್ಟಿ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



> "ಕುಡಿಯುವ ನೀರು ಜನರ ಮೂಲಭೂತ ಹಕ್ಕು. ಸರ್ಕಾರ ಜನರ ಅನುಕೂಲಕ್ಕಾಗಿ ಕೈಗೊಂಡಿರುವ ಯೋಜನೆಗಳು ಯಾವುದೇ ಕಾರಣಕ್ಕೂ ವಿಳಂಬವಾಗಬಾರದು. ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳ್ಳಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

## ಇಂದು ರಾಜ್ಯ ಮಟ್ಟದ ಸ್ಲಂ ಜನರ ಬೃಹತ್ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಜನಾಂದೋಲನ-ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಜೂನ್ 20ರಂದು ಗದಗ ನಗರದಲ್ಲಿ ರಾಜ್ಯ ಮಟ್ಟದ ಸ್ಲಂ ಜನರ ಪ್ರತಿನಿಧಿಗಳ ಬೃಹತ್ ಸಮ್ಮೇಳನ ಆಯೋಜಿಸಲಾಗಿದೆ.

ಸಮ್ಮೇಳನದ ಅಂಗವಾಗಿ ಬೆಳಿಗ್ಗೆ 10 ಗಂಟೆಗೆ ಗದಗ-ಬೆಟಗೇರಿ ನಗರಸಭೆ ಆವರಣದಿಂದ ಬೃಹತ್ ರ್‍ಯಾಲಿ ಆರಂಭವಾಗಲಿದ್ದು, ಬಳಿಕ ನಗರದ ಲಾಯನ್ಸ್ ಭವನದಲ್ಲಿ ರಾಜ್ಯ ಮಟ್ಟದ ಸ್ಲಂ ಜನರ ಪ್ರತಿನಿಧಿಗಳ ಸಮ್ಮೇಳನ ನಡೆಯಲಿದೆ.



ಕಾರ್ಯಕ್ರಮದಲ್ಲಿ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಪ್ರಗತಿಪರ ಚಿಂತಕರು, ಸ್ಲಂ ಜನಾಂದೋಲನದ ರಾಜ್ಯ ಸಮಿತಿ ಸಂಚಾಲಕರು ಹಾಗೂ ರಾಜ್ಯದ ವಿವಿಧ ಜಿಲ್ಲೆಗಳ ಪ್ರತಿನಿಧಿಗಳು ಭಾಗವಹಿಸಿ ಸ್ಲಂ ನಿವಾಸಿಗಳ ಸಮಸ್ಯೆಗಳು, ಹಕ್ಕುಗಳು ಮತ್ತು ಅಭಿವೃದ್ಧಿ ವಿಚಾರಗಳ ಕುರಿತು ಚರ್ಚಿಸಲಿದ್ದಾರೆ.

ಸ ವ್ ್ಮ ೀ ಳ ನ ವ ನ ್ನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿಯ ಪದಾಧಿಕಾರಿಗಳು, ಸ್ವಾಗತ ಸಮಿತಿ ಸದಸ್ಯರು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸ್ಲಂ ನಿವಾಸಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂಗಡಿಗಳಿಗೆ ದಿಢೀರ್ ಭೇಟಿ; ದರ-ದಾಸ್ತಾನು ಪರಿಶೀಲನೆ 'ರೈತರ ಹಕ್ಕಿಗೆ ಧಕ್ಕೆ ತಂದರೆ ಕಠಿಣ ಕ್ರಮ'

# ಗೊಬ್ಬರ ಅಕ್ರಮದ ವಿರುದ್ಧ ಡಿಸಿ ಚಾಟಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರು ಮಳೆ ಕೊರತೆಯ ನಡುವೆ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಅಕ್ರಮ ನಡೆಯದಂತೆ ನೋಡಿಕೊಳ್ಳುವ ಉದ್ದೇಶದಿಂದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಶುಕ್ರವಾರ ಪಟ್ಟಣದ ವಿವಿಧ ರಸಗೊಬ್ಬರ ಅಂಗಡಿಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗೊಬ್ಬರ ದಾಸ್ತಾನು, ದರಪಟ್ಟಿ, ವಿತರಣಾ ವ್ಯವಸ್ಥೆ, ಬಿಲ್ ಪುಸ್ತಕ ಸೇರಿದಂತೆ ವಿವಿಧ ದಾಖಲೆಗಳನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಗೊಬ್ಬರ ಮಾರಾಟದ ವೇಳೆ ರೈತರಿಗೆ ನಿಯಮಾನುಸಾರ ಬಿಲ್ ನೀಡಲಾಗುತ್ತಿದೆಯೇ ಎಂಬ ಬಗ್ಗೆ ಅಂಗಡಿ ಮಾಲೀಕರನ್ನು ಪ್ರಶ್ನಿಸಿದರು. ಗೋಡೆಯ ಮೇಲಿನ ದಾಸ್ತಾನು ವಿವರ, ದಾಖಲಾತಿ ಪುಸ್ತಕ ಹಾಗೂ ಗೋಡೌನ್‌ನಲ್ಲಿರುವ ಸಂಗ್ರಹದ ಮಾಹಿತಿಯನ್ನು ತಾಳೆ ಹಾಕಿ ಪರಿಶೀಲಿಸಿದರು.

ಮಳೆಯಾದ ಬಳಿಕ ಯೂರಿಯಾ ಗೊಬ್ಬರದ ಬೇಡಿಕೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಅಗತ್ಯ ದಾಸ್ತಾನು ಇಟ್ಟುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.



> "ರಸಗೊಬ್ಬರ ವಿತರಣೆಯಲ್ಲಿ ಕೃತಕ ಅಭಾವ ಸೃಷ್ಟಿ, ಹೆಚ್ಚುವರಿ ದರ ವಸೂಲಿ ಹಾಗೂ ನಿಯಮ ಉಲ್ಲಂಘನೆ ಸಹಿಸಲಾಗುವುದಿಲ್ಲ. ರೈತರಿಗೆ ನ್ಯಾಯಸಮ್ಮತ ಸೇವೆ ದೊರೆಯಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

▸▸2ನೇ ಪುಟಕ್ಕೆ

# ಗೊಬ್ಬರ ಅಕ್ರಮದ ವಿರುದ್ಧ ಡಿಸಿ ಚಾಟಿ

▸▸ ಮೊದಲನೇ ಪುಟದಿಂದ

ಈ ವೇಳೆ ರೈತರು ಮಳೆಯ ಕೊರತೆಯಿಂದ ಬೆಳೆ ಉಳಿಸಿಕೊಳ್ಳಲು ಟ್ಯಾಂಕರ್ ಮೂಲಕ ನೀರು ಹಾಯಿಸುತ್ತಿರುವ ಬಗ್ಗೆ ಮಾಹಿತಿ ನೀಡಿದಾಗ, ಅದು ತಾತ್ಕಾಲಿಕ ಪರಿಹಾರ ಮಾತ್ರ. ಉತ್ತಮ ಇಳುವರಿ ಪಡೆಯಲು ಸಮರ್ಪಕ ಮಳೆಯೇ ಅಗತ್ಯ ಎಂದು ಜಿಲ್ಲಾಧಿಕಾರಿ ಹೇಳಿದರು.

ಮುಂದಿನ ದಿನಗಳಲ್ಲಿ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಕೃಷಿ ಪರಿಕರ ಮಾರಾಟಗಾರರು ರೈತರೊಂದಿಗೆ ಸಹಾನುಭೂತಿಯಿಂದ ವರ್ತಿಸಬೇಕು. ರಸಗೊಬ್ಬರ ವಿತರಣೆಯಲ್ಲಿ ಕೃತಕ ಅಭಾವ ಸೃಷ್ಟಿಸುವುದು, ನಿಗದಿತ ದರಕ್ಕಿಂತ ಹೆಚ್ಚು ಹಣ ವಸೂಲಿ ಮಾಡುವುದು ಅಥವಾ ಬಿಳಿ ಹಾಳೆಯಲ್ಲಿ ಬಿಲ್ ನೀಡುವುದು ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರಸ್ತುತ ಯೂರಿಯಾ ಮತ್ತು ಡಿಎಪಿ ಹೊರತುಪಡಿಸಿ ಇತರೆ ಕಾಂಪ್ಲೆಕ್ಸ್ ಗೊಬ್ಬರಗಳು ಲಭ್ಯವಿದ್ದು, ಯೂರಿಯಾ ದಾಸ್ತಾನು ಕೂಡ ಶೀಘ್ರದಲ್ಲೇ ಬರಲಿರುವುದರಿಂದ ರೈತರು ಆತಂಕ ಪಡುವ ಅಗತ್ಯವಿಲ್ಲ ಎಂದು ಭರವಸೆ ನೀಡಿದರು. ರೈತರು ರಾಸಾಯನಿಕ ಗೊಬ್ಬರಗಳ ಮೇಲೆಯೇ ಅವಲಂಬಿತರಾಗದೆ ಕೊಟ್ಟಿಗೆ ಗೊಬ್ಬರ, ಕಾಂಪೋಸ್ಟ್, ಹಸಿರು ಗೊಬ್ಬರ, ಜೀವಾಮೃತ ಹಾಗೂ ನ್ಯಾನೋ ಗೊಬ್ಬರಗಳಂತಹ ಪರ್ಯಾಯ ಕ್ರಮಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪರಿಶೀಲನೆ ವೇಳೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ, ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ಕೃಷಿ ಅಧಿಕಾರಿ ಚಂದ್ರಶೇಖರಗೌಡ ನರಸಮ್ಮನವರ, ಪಿಎಸ್ಐ ನಾಗರಾಜ ಗಡದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯುತ್ ನಿಲುಗಡೆ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜೂನ್ 20ರಂದು 110 ಕೆವ್ಹಿ ಗದಗ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದ್ದ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಸಾಮೂಹಿಕ ವಿವಾಹ ಕಾರ್ಯಕ್ರಮಗಳ ನಿಮಿತ್ತ ಮುಂದೂಡಲಾಗಿದೆ. ಹೀಗಾಗಿ ಈ ಹಿಂದೆ ಪ್ರಕಟಿಸಲಾಗಿದ್ದ ವಿದ್ಯುತ್ ನಿಲುಗಡೆ ಕಾರ್ಯಕ್ರಮವನ್ನು ರದ್ದುಗೊಳಿಸಲಾಗಿದ್ದು, ಜೂನ್ 20ರಂದು ನಿಗದಿತ ವೇಳಾಪಟ್ಟಿಯಂತೆ ವಿದ್ಯುತ್ ಸರಬರಾಜು ಮುಂದುವರಿಯಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ. ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಈ ಕುರಿತು ಗಮನ ಹರಿಸಬೇಕೆಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

**ಮುಂಗಾರು ಆಗಮನದ ನಿಮಿತ್ತ ಉಂಡೆ ಬೀಜಗಳ ಮಹತ್ವ ಮತ್ತು ಪರಿಸರ ಉಳಿವಿನ ಅಗತ್ಯತೆ ಕುರಿತು ವಿಶೇಷ ಲೇಖನ**

# ಉಂಡೆ ಬೀಜಗಳ ಮೂಲಕ ಪ್ರಕೃತಿಯನ್ನು ಹಸಿರಾಗಿಸೋಣ



ಜೂನ್ ತಿಂಗಳು ಎಂದರೆ ಪ್ರಕೃತಿ ಪ್ರಿಯರ ಮನದಲ್ಲಿ ಹೊಸ ಉತ್ಸಾಹ ಮತ್ತು ನಿರೀಕ್ಷೆಯ ಸಂಭ್ರಮ. ಬೇಸಿಗೆಯ ಬಿಸಿಲಿಗೆ ಕಂಗೆಟ್ಟ ಭೂಮಿಗೆ ತಂಪೆರೆಯುವ ಮುಂಗಾರು ಮಳೆಯ ಆಗಮನ ಇದೇ ತಿಂಗಳಲ್ಲಿ ಆಗುತ್ತದೆ. ಕೃಷಿಕರು ನೇಗಿಲು ಹಿಡಿದು ಹೊಲಕ್ಕೆ ಇಳಿಯುವ ಸಮಯವೂ ಇದೇ. ಕರ್ನಾಟಕದಲ್ಲಿ ಮುಂಗಾರು ಮಳೆ ಎಂದರೆ ಕೇವಲ ಋತು ಬದಲಾವಣೆ ಅಲ್ಲ; ಅದು ಪ್ರಕೃತಿಯ ಪುನರ್ಜನ್ಮದ ಹಬ್ಬ.

ಮಳೆ ಹನಿಗಳ ಸ್ಪರ್ಶದಿಂದ ಒಣಗಿದ್ದ ಭೂಮಿ ಮತ್ತೆ ಚಿಗುರೊಡೆಯುತ್ತದೆ. ಮರಗಳು, ಗಿಡಗಳು, ಪ್ರಾಣಿ-ಪಕ್ಷಿಗಳು ಸೇರಿದಂತೆ ಸಮಸ್ತ ಜೀವಸಂಕುಲಕ್ಕೆ ಹೊಸ ಜೀವ ತುಂಬುತ್ತದೆ. ಇಂತಹ ಸಮಯದಲ್ಲಿ ಪ್ರಕೃತಿಗೆ ನಾವು ಮರಳಿ ನೀಡಬಹುದಾದ ಅತ್ಯುತ್ತಮ ಕೊಡುಗೆ ಎಂದರೆ ಹಸಿರು ಪರಿಸರ ನಿರ್ಮಾಣ.

**ಪ್ರಕೃತಿ ನಮ್ಮ ಬದುಕಿನ ಆಧಾರ**

ನಾವು ಉಸಿರಾಡುವ ಗಾಳಿ, ಕುಡಿಯುವ ನೀರು, ತಿನ್ನುವ ಆಹಾರ, ವಾಸಿಸುವ ಪರಿಸರ ಎಲ್ಲವೂ ಪ್ರಕೃತಿಯ ಕೊಡುಗೆ. ಮರಗಳು ನಮಗೆ ಆಮ್ಲಜನಕ ನೀಡುತ್ತವೆ. ಮಣ್ಣು, ನೀರು, ಕಾಡುಗಳು ಹಾಗೂ ಜೀವ ವೈವಿಧ್ಯತೆ ಭೂಮಿಯ ಸಮತೋಲನ ಕಾಪಾಡುತ್ತವೆ. ಆದರೆ ಅಭಿವೃದ್ಧಿಯ ಹೆಸರಿನಲ್ಲಿ ಮರಗಳ ನಾಶ, ನಗರೀಕರಣ ಹಾಗೂ ಪರಿಸರ ಹಾನಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪ್ರಕೃತಿಯ ಅಸ್ತಿತ್ವವೇ ಸವಾಲಿನಲ್ಲಿದೆ.

ಪ್ರಕೃತಿಯನ್ನು ಉಳಿಸುವ ಹೊಣೆಗಾರಿಕೆ ಕೇವಲ ಸರ್ಕಾರದದ್ದಲ್ಲ. ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಆಗಿದೆ. ಈ ನಿಟ್ಟಿನಲ್ಲಿ ಉಂಡೆ ಬೀಜಗಳ ಬಳಕೆ ಸರಳ ಹಾಗೂ ಪರಿಣಾಮಕಾರಿ ಮಾರ್ಗವಾಗಿದೆ.

**ಏನಿದು ಉಂಡೆ ಬೀಜ?**

ಉಂಡೆ ಬೀಜ ಅಥವಾ 'ಸೀಡ್ ಬಾಲ್' ಎಂದರೆ ಫಲವತ್ತಾದ ಮಣ್ಣು, ಸಾವಯವ ಗೊಬ್ಬರ ಹಾಗೂ ದೇಶಿ ಮರಗಳ ಬೀಜಗಳನ್ನು ಸೇರಿಸಿ ತಯಾರಿಸುವ ಮಣ್ಣಿನ ಉಂಡೆ. ಕಪ್ಪು ಮಣ್ಣು ಅಥವಾ ಕೆಮ್ಮಣ್ಣಿಗೆ ಕೊಟ್ಟಿಗೆ ಗೊಬ್ಬರ ಅಥವಾ ಸಾವಯವ ಗೊಬ್ಬರ ಬೆರೆಸಿ ಅದರೊಳಗೆ ಬೀಜವನ್ನು ಇಟ್ಟು ಸಣ್ಣ ಉಂಡೆಯಾಗಿ ತಯಾರಿಸಲಾಗುತ್ತದೆ. ನಂತರ ಅವುಗಳನ್ನು ನೆರಳಿನಲ್ಲಿ ಒಣಗಿಸಿ ಸಂಗ್ರಹಿಸಿಡಲಾಗುತ್ತದೆ.

ಮಳೆಗಾಲ ಆರಂಭವಾದಾಗ ಈ ಉಂಡೆಗಳನ್ನು ಖಾಲಿ ಜಾಗಗಳು, ಗುಡ್ಡಗಾಡು ಪ್ರದೇಶಗಳು, ಬಂಜರು ಭೂಮಿ ಅಥವಾ ರಸ್ತೆ ಬದಿಗಳಲ್ಲಿ ಎಸೆದರೆ ಸಾಕು. ಮಳೆಯ ನೀರು ಸಿಗುತ್ತಿದ್ದಂತೆ ಬೀಜ ಮೊಳಕೆಯೊಡೆದು ಗಿಡವಾಗಿ ಬೆಳೆಯುತ್ತದೆ.

**ಸೀಡ್ ಬಾಲ್‌ಗಳ ವಿಶೇಷತೆ**

ಸಾಮಾನ್ಯವಾಗಿ ಬೀಜಗಳನ್ನು ನೆಲದ ಮೇಲೆ ಬಿತ್ತಿದರೆ ಪಕ್ಷಿಗಳು, ಇರುವೆಗಳು ಅಥವಾ ಇತರೆ ಜೀವಿಗಳು ಅವುಗಳನ್ನು ತಿಂದುಬಿಡುವ ಸಾಧ್ಯತೆ ಹೆಚ್ಚು. ಆದರೆ ಮಣ್ಣಿನ ಕವಚದಲ್ಲಿರುವ ಉಂಡೆ ಬೀಜಗಳು ಸುರಕ್ಷಿತವಾಗಿರುತ್ತವೆ. ಮಳೆಯ ನೀರು ಹೀರಿಕೊಂಡ ನಂತರ ಮಣ್ಣಿನ ಉಂಡೆ ಮೃದುವಾಗಿ ಬೀಜ ಮೊಳಕೆಯೊಡೆಯಲು ಅನುಕೂಲವಾಗುತ್ತದೆ. ಜೊತೆಗೆ ಗೊಬ್ಬರದ ಪೋಷಕಾಂಶಗಳು ಗಿಡದ ಬೆಳವಣಿಗೆಗೆ ನೆರವಾಗುತ್ತವೆ.

**ಹಸಿರು ಪರಿಸರಕ್ಕೆ ಉಂಡೆ ಬೀಜಗಳ ಕೊಡುಗೆ**

ಇತ್ತೀಚಿನ ವರ್ಷಗಳಲ್ಲಿ ಅರಣ್ಯ ನಾಶ, ಕಾಡ್ಗಿಚ್ಚು ಮತ್ತು ನಗರೀಕರಣದಿಂದ ಹಸಿರು ಪ್ರದೇಶಗಳು ಕಡಿಮೆಯಾಗುತ್ತಿವೆ. ಇಂತಹ ಸಂದರ್ಭದಲ್ಲಿ ಉಂಡೆ ಬೀಜಗಳು ಪರಿಸರ ಪುನಶ್ಚೇತನಕ್ಕೆ ಸಹಕಾರಿಯಾಗುತ್ತವೆ.

ಆಲ, ಅರಳಿ, ಬೇವು, ನೇರಳೆ, ಹೊಂಗೆ ಸೇರಿದಂತೆ ದೇಶಿ ಜಾತಿಯ ಮರಗಳ ಬೀಜಗಳನ್ನು ಬಳಸುವುದರಿಂದ ಪರಿಸರಕ್ಕೆ ಹೆಚ್ಚಿನ ಪ್ರಯೋಜನ ದೊರೆಯುತ್ತದೆ. ಇವುಗಳು ಆಮ್ಲಜನಕ ಉತ್ಪಾದನೆ, ಮಣ್ಣಿನ ಸಂರಕ್ಷಣೆ ಹಾಗೂ ಹಕ್ಕಿ-ಪಕ್ಷಿಗಳಿಗೆ ಆಶ್ರಯ ಕಲ್ಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ವೈಪರೀತ್ಯಗಳ ಸವಾಲು ಎದುರಿಸುತ್ತಿರುವ ಇಂದಿನ ದಿನಗಳಲ್ಲಿ ಉಂಡೆ ಬೀಜಗಳ ಬಳಕೆ ಅತ್ಯಂತ ಕಡಿಮೆ ವೆಚ್ಚದ ಹಾಗೂ ಪರಿಣಾಮಕಾರಿ ಪರಿಸರ ಸಂರಕ್ಷಣಾ ಕ್ರಮವಾಗಿದೆ.

**ಮನೆಯಲ್ಲೇ ತಯಾರಿಸಬಹುದು**

ರಜಾದಿನಗಳಲ್ಲಿ ಮಕ್ಕಳು ಮತ್ತು ಕುಟುಂಬ ಸದಸ್ಯರೊಂದಿಗೆ ಸೇರಿ ಉಂಡೆ ಬೀಜಗಳನ್ನು ತಯಾರಿಸಬಹುದು. ಇದು ಪರಿಸರ ಜಾಗೃತಿ ಮೂಡಿಸುವುದರ ಜೊತೆಗೆ ಮಕ್ಕಳಲ್ಲಿ ಪ್ರಕೃತಿ ಪ್ರೇಮ ಬೆಳೆಸಲು ಸಹಕಾರಿಯಾಗುತ್ತದೆ.

ಪ್ರವಾಸ ಅಥವಾ ಲಾಂಗ್ ಡ್ರೈವ್‌ಗೆ ತೆರಳುವಾಗ ಕೆಲವು ಉಂಡೆ ಬೀಜಗಳನ್ನು ಜೊತೆಯಲ್ಲಿ ತೆಗೆದು-ಕೊಂಡು ಹೋಗಿ, ದಾರಿಯಲ್ಲಿ ಸಿಗುವ ಖಾಲಿ ಪ್ರದೇಶಗಳಲ್ಲಿ ಎಸೆಯುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬಹುದು.

**ನಮ್ಮಿಂದ ಒಂದು ಹಸಿರು ಹೆಜ್ಜೆ**

ಪ್ರಕೃತಿ ನಮಗೆ ಬದುಕಲು ಬೇಕಾದ ಎಲ್ಲವನ್ನೂ ನೀಡಿದೆ.

ಅದಕ್ಕೆ ಪ್ರತಿಯಾಗಿ ನಾವು ನೀಡಬೇಕಾಗಿರುವುದು ಒಂದು ಸಣ್ಣ ಪ್ರಯತ್ನ ಮಾತ್ರ. ಈ ಮುಂಗಾರಿನಲ್ಲಿ ನಾವು ಬಿತ್ತುವ ಪ್ರತಿಯೊಂದು ಉಂಡೆ ಬೀಜವೂ ನಾಳಿನ ಹಸಿರು ಕರ್ನಾಟಕದ ಕನಸಿಗೆ ಅಡಿಗಲ್ಲಾಗಬಹುದು.

ಬನ್ನಿ, ಈ ಮಳೆಗಾಲದಲ್ಲಿ ಉಂಡೆ ಬೀಜಗಳನ್ನು ಬಿತ್ತೋಣ. ಪ್ರಕೃತಿಗೆ ಹಸಿರು ಸೀರೆಯುಡಿಸೋಣ. ಭೂಮಿಯನ್ನು ಉಳಿಸೋಣ.



–ವೆಂಕಟೇಶ ಭಂಡಾರಿ
ತರಬೇತಿ ನಿರತರು, ರಾಜ್ಯ ಸಮಾಚಾರ ಕೇಂದ್ರ, ಹುಬ್ಬಳ್ಳಿ

**ದೇಶದ ನೈಜ ಸಮಸ್ಯೆಗಳು ಬದಿಗೆ ಸರಿದಿವೆ; ಚುನಾವಣಾ ಆಯೋಗ ಸ್ಪಷ್ಟನೆ ನೀಡಲಿ: ಯೂಸುಫ್ ಕಣವಿ**

# ಎಸ್‌ಐಆರ್ ಹೆಸರಿನಲ್ಲಿ ಮತದಾರರ ಹಕ್ಕಿಗೆ ಕತ್ತರಿ?

■ ವಿಜಯಸಾಕ್ಷಿ ಸುದ್ದಿ, ಗದಗ




ದೇಶದಲ್ಲಿ ಬಡತನ, ನಿರುದ್ಯೋಗ, ರಾಷ್ಟ್ರೀಯ ಭದ್ರತೆ ಸೇರಿದಂತೆ ಜನಜೀವನಕ್ಕೆ ಸಂಬಂಧಿಸಿದ ಗಂಭೀರ ವಿಷಯಗಳ ಕುರಿತು ಚರ್ಚೆಯಾಗಬೇಕಾದ ಸಂದರ್ಭದಲ್ಲಿ ಎಸ್‌ಐಆರ್ (ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ) ವಿಷಯವೇ ರಾಷ್ಟ್ರಮಟ್ಟದ ಚರ್ಚೆಯಾಗಿ ಪರಿಣಮಿಸಿರುವುದು ವಿಷಾದನೀಯ ಎಂದು ಜಮಾಅತೆ ಇಸ್ಲಾಮಿ ಹಿಂದ್ ಕರ್ನಾಟಕ ರಾಜ್ಯ ಕಾರ್ಯದರ್ಶಿ ಯೂಸುಫ್ ಕಣವಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಶ್ರೀಮಂತರು ಮತ್ತು ಪ್ರಭಾವಿ ವರ್ಗದವರಿಗೆ ಮಾತ್ರ ಮತದಾನದ ಹಕ್ಕು ಇತ್ತು. ಸ್ವಾತಂತ್ರ್ಯಾನಂತರ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮತದಾನದ ಹಕ್ಕು ಸಾರ್ವತ್ರಿಕವಾಗಿದ್ದು, ಇಂದು ಕೋಟ್ಯಂತರ ಜನರು ಮತದಾರರಾಗಿದ್ದಾರೆ ಎಂದು ತಿಳಿಸಿದರು.

> "ದೇಶದಲ್ಲಿ ಬಡತನ, ಭದ್ರತೆ ಹಾಗೂ ಉದ್ಯೋಗದಂತಹ ಗಂಭೀರ ವಿಷಯಗಳು ಚರ್ಚೆಯಾಗಬೇಕಾದ ಸಂದರ್ಭದಲ್ಲಿ ಎಸ್‌ಐಆರ್ ವಿಚಾರವೇ ಪ್ರಮುಖ ಚರ್ಚೆಯಾಗಿರುವುದು ಆತಂಕಕಾರಿ ಬೆಳವಣಿಗೆ."
> – ಯೂಸುಫ್ ಕಣವಿ, ರಾಜ್ಯ ಕಾರ್ಯದರ್ಶಿ, ಜಮಾಅತೆ ಇಸ್ಲಾಮಿ ಹಿಂದ್

ದೇಶಕ್ಕೆ ಅಕ್ರಮವಾಗಿ ಪ್ರವೇಶಿಸಿರುವ ನುಸುಳುಕೋರರನ್ನು ಗುರುತಿಸಿ ಕ್ರಮ ಕೈಗೊಳ್ಳುವುದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ. ಆದರೆ, ಈ ವಿಷಯದಲ್ಲಿ ಸ್ಪಷ್ಟ ಮಾಹಿತಿ ನೀಡದೆ ಸಾಮಾನ್ಯ ಮತದಾರರ ಪಟ್ಟಿಯನ್ನೇ ಪ್ರಶ್ನಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಆರೋಪಿಸಿದರು.

ಎಸ್‌ಐಆರ್ ಪ್ರಕ್ರಿಯೆ ಮೂಲಕ ದೇಶದ ವಿವಿಧ ರಾಜ್ಯಗಳಲ್ಲಿ ಲಕ್ಷಾಂತರ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂಬ ವರದಿಗಳು ಬರುತ್ತಿವೆ. ಈ ಪ್ರಕ್ರಿಯೆಯಲ್ಲಿ ಎಷ್ಟು ಮಂದಿ ಅಕ್ರಮ ನುಸುಳುಕೋರರು ಹಾಗೂ ಎಷ್ಟು ಮಂದಿ ಸಾಮಾನ್ಯ ನಾಗರಿಕರು ಎಂಬುದನ್ನು ಚುನಾವಣಾ ಆಯೋಗ ಸಾರ್ವಜನಿಕವಾಗಿ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯಿಂದ ಹೆಸರು ಕೈಬಿಡುವ ಪ್ರಕ್ರಿಯೆಯಲ್ಲಿ ಬಡವರು, ದಲಿತರು ಮತ್ತು ವಂಚಿತ ಸಮುದಾಯದ ಜನರಿಗೆ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸಬೇಕು. ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಭೂತ ಹಕ್ಕಾಗಿದ್ದು, ಅದರ ರಕ್ಷಣೆಗೆ ಎಲ್ಲರೂ ಜಾಗೃತರಾಗಬೇಕು ಎಂದು ಹೇಳಿದರು.

ಯುವ ಮುಖಂಡ ಸರೋವರ ಬೆಂಕಿಕೇರಿ ಮಾತನಾಡಿ, ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಸ್ವಾಗತಾರ್ಹವಾದರೂ, ಇತ್ತೀಚೆಗೆ ಜಾರಿಗೆ ತರಲಾಗುತ್ತಿರುವ ಎಸ್‌ಐಆರ್ ಪ್ರಕ್ರಿಯೆ ಸಾರ್ವಜನಿಕರಲ್ಲಿ ಗೊಂದಲ ಮತ್ತು ಆತಂಕ ಮೂಡಿಸುತ್ತಿದೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಬಿಲಾಲ್ ಗೋಕಾವಿ, ಜುನ್ನೈದ್ ಉಮಚಗಿ, ಆರಾಧನಾ ಬಣಕಾರ, ಆರೀಫ್ ಉಲ್ಲಾ, ಮುತ್ತು ಬಿಳೆಯಲಿ, ಅನ್ವರ್ ಬಾಗೇವಾಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಹಕ್ಕೊತ್ತಾಯಗಳು**

'ಲಾಜಿಕಲ್ ಡಿಸ್ಕ್ರೆಪೆನ್ಸಿ' ಸಾಫ್ಟ್‌ವೇರ್ ಅನ್ನು ಕರ್ನಾಟಕದಲ್ಲಿ ಬಳಸಬಾರದು.

ಮತದಾರರ ಪಟ್ಟಿಯ ಕರಡು ಪ್ರತಿಯನ್ನು ಸಾರ್ವಜನಿಕ ಪರಿಶೀಲನೆಗೆ ಲಭ್ಯಗೊಳಿಸಬೇಕು.

ಗ್ರಾಮಸಭೆ ಹಾಗೂ ವಾರ್ಡ್ ಸಭೆಗಳ ಮೂಲಕ ಸಾರ್ವಜನಿಕ ಪರಿಶೀಲನೆ ಮತ್ತು ತಿದ್ದುಪಡಿಗೆ ಅವಕಾಶ ಕಲ್ಪಿಸಬೇಕು.

ಅಪೀಲು ಸಲ್ಲಿಸಲು ಕನಿಷ್ಠ ಆರು ತಿಂಗಳ ಕಾಲಾವಕಾಶ ನೀಡಬೇಕು.

**"ಇಂಜಿನಿಯರಿಂಗ್, ವೈದ್ಯಕೀಯ ಶಿಕ್ಷಣದ ಕನಸಿಗೆ ಆರ್ಥಿಕ ಬೆಂಬಲ- ವಿದ್ಯಾರ್ಥಿಗಳಿಂದ 'ನರ್ಚರ್ ಮೆರಿಟ್' ಯೋಜನೆಗೆ ಅರ್ಜಿ ಆಹ್ವಾನ**

# ಬಡ ಪ್ರತಿಭೆಗಳಿಗೆ ವಿದ್ಯಾಪೋಷಕದ ಆಸರೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಆರ್ಥಿಕ ಸಂಕಷ್ಟದಲ್ಲಿರುವ ಪ್ರತಿಭಾವಂತ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಕನಸಿಗೆ ನೆರವಾಗುವ ಉದ್ದೇಶದಿಂದ ಧಾರವಾಡದ ವಿದ್ಯಾಪೋಷಕ ಸಂಸ್ಥೆಯು 2026-27ನೇ ಶೈಕ್ಷಣಿಕ ಸಾಲಿನ 'ನರ್ಚರ್ ಮೆರಿಟ್' ಯೋಜನೆಯಡಿ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ ಪಡೆಯಲು ಬಯಸುವ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಮೊದಲ ಬಾರಿಗೆ ಬರೆದು ಶೇ.80ಕ್ಕಿಂತ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ. ದ್ವಿತೀಯ ಪಿಯುಸಿ ನಂತರ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಪದವಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಬಯಸುವ ವಿದ್ಯಾರ್ಥಿಗಳಿಗೆ ಯೋಜನೆಯ ಸೌಲಭ್ಯ ದೊರೆಯಲಿದೆ.

ಇಂಜಿನಿಯರಿಂಗ್ ಪ್ರವೇಶಾಕಾಂಕ್ಷಿಗಳು ಸಿಇಟಿ ಪರೀಕ್ಷೆಯಲ್ಲಿ 25 ಸಾವಿರಕ್ಕಿಂತ ಕಡಿಮೆ ರ್‍ಯಾಂಕ್ ಪಡೆದಿರಬೇಕು. ವೈದ್ಯಕೀಯ ಶಿಕ್ಷಣ ಪಡೆಯಲು ಬಯಸುವ ವಿದ್ಯಾರ್ಥಿಗಳು ರಾಜ್ಯ ಮಟ್ಟದಲ್ಲಿ 3 ಸಾವಿರಕ್ಕಿಂತ ಕಡಿಮೆ ಹಾಗೂ ಅಖಿಲ ಭಾರತ ಮಟ್ಟದಲ್ಲಿ 60 ಸಾವಿರಕ್ಕಿಂತ ಕಡಿಮೆ ರ್‍ಯಾಂಕ್ ಪಡೆದಿರಬೇಕು ಎಂದು ಸಂಸ್ಥೆ ತಿಳಿಸಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಕುಟುಂಬದ ಮಾಸಿಕ ಆದಾಯ ₹15 ಸಾವಿರಕ್ಕಿಂತ ಕಡಿಮೆ ಇರಬೇಕು. ವಿದ್ಯಾರ್ಥಿಗಳ ಪೋಷಕರು ಕರ್ನಾಟಕದ ನಿವಾಸಿಗಳಾಗಿರಬೇಕು ಎಂಬ ಷರತ್ತು ವಿಧಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ವಿದ್ಯಾಪೋಷಕ ಸಂಸ್ಥೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು.

ಯೋಜನೆಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿ, ಮಾರ್ಗಸೂಚಿಗಳು ಹಾಗೂ ನಿಯಮಗಳಿಗಾಗಿ ವಿದ್ಯಾಪೋಷಕ ಸಂಸ್ಥೆಯನ್ನು ಸಂಪರ್ಕಿಸಬಹುದಾಗಿದೆ. ಗದಗ ಜಿಲ್ಲೆಯ ವಿದ್ಯಾರ್ಥಿಗಳಿಗೆ ಹೆಚ್ಚಿನ ಮಾಹಿತಿಗಾಗಿ ಡಾ. ಎಸ್.ಬಿ. ಸಜ್ಜನರ, ಡಾ. ಪ್ರಭು ಗಂಜಿಹಾಳ, ಡಾ. ಪ್ರಕಾಶ ಕಣವಿ, ಪ್ರೊ. ಮಂಜುನಾಥ ಹೊಳ್ಳಿಯವರ, ಪ್ರೊ. ಎಚ್. ಎನ್. ಕಾಳೆ ಹಾಗೂ ಆರ್. ಕೆ. ಭಾಗವಾನ ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

**ಲಕ್ಷ್ಮೇಶ್ವರದಲ್ಲಿ ಸಾಂಪ್ರದಾಯಿಕ ಗುರ್ಜಿ ಪೂಜೆ; ಬೆಳೆ ಉಳಿಸಲೆಂದು ರೈತ ಮಹಿಳೆಯರ ಆರ್ತ ಮೊರೆ**

# ಮಳೆಗಾಗಿ ಗುರ್ಜಿ ಮೊರೆ... ರೈತರ ಕಣ್ಣಲ್ಲಿ ಭರವಸೆಯ ಹೊಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



"ಗುರ್ಜಿ... ಗುರ್ಜಿ... ಎಲ್ಲಾಡಿ ಬಂದೆ... ಹಳ್ಳ-ಕೊಳ್ಳ ತಿರುಗಾಡಿ ಬಂದೆ... ಕಾರ ಮಳೆಯೇ, ಕಪ್ಪತ್ತ ಮಳೆಯೇ... ಸುರಿ ಮಳೆಯೋ ಸುರಿ ಮಳೆಯೋ..." ಎಂಬ ಜನಪದ ಗೀತೆಯ ನಿನಾದದೊಂದಿಗೆ ಪಟ್ಟಣದ ಸಾಲಗೇರಿ ಓಣಿಯ ರೈತ ಮಹಿಳೆಯರು ಶುಕ್ರವಾರ ಸಾಂಪ್ರದಾಯಿಕ ಗುರ್ಜಿ ಪೂಜೆ ನೆರವೇರಿಸಿ ಮಳೆರಾಯನಿಗೆ ಮೊರೆ ಹೋದರು.

ಮಳೆಯನ್ನೇ ನಂಬಿ ಹೆಸರು, ಶೇಂಗಾ, ಹತ್ತಿ, ಉಳ್ಳಾಗಡ್ಡಿ, ಮೆಣಸಿನಕಾಯಿ ಹಾಗೂ ಗೋವಿನ ಜೋಳ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆ ಮಾಡಿರುವ ರೈತರು ಕಳೆದ ಹದಿನೈದು ದಿನಗಳಿಂದ ಮಳೆಯ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ತೇವಾಂಶದ ಅಭಾವದಿಂದ ಮೊಳಕೆಯೊಡೆದ ಬೆಳೆಗಳು ಒಣಗತೊಡಗಿದ್ದು, ರೈತರಲ್ಲಿ ಆತಂಕ ಮನೆ ಮಾಡಿದೆ.

ಈ ಹಿನ್ನೆಲೆಯಲ್ಲಿ ಕೃಷಿಯನ್ನೇ ಬದುಕಾಗಿಸಿಕೊಂಡ ರೈತರು ಹಾಗೂ ರೈತ ಮಹಿಳೆಯರು ಮಳೆಗಾಗಿ ಸಂಪ್ರದಾಯದ ಮೊರೆ ಹೋಗಿದ್ದಾರೆ. ಗ್ರಾಮೀಣ ಜಾನಪದ ಸಂಸ್ಕೃತಿಯ ವಿಶಿಷ್ಟ ಆಚರಣೆಯಾದ ಗುರ್ಜಿ ಪೂಜೆಯಲ್ಲಿ ಆಕಳ ಸಗಣಿಯಿಂದ ತಯಾರಿಸಿದ ಗುರ್ಜಿ ಮೂರ್ತಿಯನ್ನು ಹಂಚಿನ ಮೇಲೆ ಪ್ರತಿಷ್ಠಾಪಿಸಿ ಹಸಿರು ಹುಲ್ಲು ಹಾಗೂ ಹೂಗಳಿಂದ ಅಲಂಕರಿಸಲಾಗುತ್ತದೆ.

ಮಹಿಳೆಯರು ಜನಪದ ಗೀತೆಗಳನ್ನು ಹಾಡುತ್ತಾ ಓಣಿಯಿಂದ ಓಣಿಗೆ ಸಂಚರಿಸುತ್ತಾರೆ. ಮನೆಗಳ ಮುಂದೆ ತೆರಳಿದಾಗ ಮನೆಯವರು ಗುರ್ಜಿ ಹೊತ್ತ ಮಹಿಳೆಯರ ಮೇಲೆ ನೀರು ಸುರಿದು ಪೂಜೆ ಸಲ್ಲಿಸುತ್ತಾರೆ. ಐದು ದಿನಗಳ ಕಾಲ ನಡೆಯುವ ಈ ಆಚರಣೆಯ ಅಂತ್ಯದಲ್ಲಿ ಸಂಗ್ರಹಿಸಿದ ಧಾನ್ಯಗಳಿಂದ ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾಗುತ್ತದೆ.

ಮಳೆಯಿಲ್ಲದೆ ಕಂಗಾಲಾಗಿರುವ ರೈತ ಸಮುದಾಯಕ್ಕೆ ಗುರ್ಜಿ ಪೂಜೆ ಕೇವಲ ಸಂಪ್ರದಾಯವಾಗಿಯೇ ಉಳಿದಿಲ್ಲ. ಅದು ರೈತರ ಬದುಕಿನ ಭರವಸೆ, ನಂಬಿಕೆ ಮತ್ತು ಆಶಾವಾದದ ಸಂಕೇತವಾಗಿ ಬೆಳೆದಿದೆ.

> "ಗುರ್ಜಿ ಪೂಜೆ ನಮ್ಮ ಪಾಲಿಗೆ ಕೇವಲ ಆಚರಣೆಯಲ್ಲ; ಅದು ರೈತರ ಬದುಕಿನ ಭರವಸೆಯ ಸಂಕೇತ. ಮಳೆರಾಯ ಕೃಪೆ ತೋರಿ ಬೆಳೆಗಳನ್ನು ಉಳಿಸಲಿ ಎಂಬುದು ನಮ್ಮ ಪ್ರಾರ್ಥನೆ."
> – ಸಾವಿತ್ರಮ್ಮ ಹಂಪಣ್ಣವರ ಹಾಗೂ ಹಂಪಮ್ಮ ಹಂಪಣ್ಣವರ, ರೈತ ಮಹಿಳೆಯರು.

**ಶೇ.70.6 ಸರ್ಕಾರಿ ನೌಕರರ ನೋಂದಣಿ ಪೂರ್ಣ; ಮಾಧ್ಯಮ ವರದಿಗಳಿಗೆ ಸರ್ಕಾರ ಸ್ಪಷ್ಟೀಕರಣ**

# 'ಕರ್ತವ್ಯ' ಆಪ್‌ಗೆ ಭರ್ಜರಿ ಸ್ಪಂದನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ಕರ್ತವ್ಯ' (KAAMS) ಆಪ್‌ನಲ್ಲಿ 2.13 ಲಕ್ಷ ಸರ್ಕಾರಿ ನೌಕರರು ನೋಂದಣಿಯಾಗಿಲ್ಲ ಎಂಬ ಕೆಲವು ಮಾಧ್ಯಮ ವರದಿಗಳಿಗೆ ರಾಜ್ಯ ಸರ್ಕಾರ ಸ್ಪಷ್ಟೀಕರಣ ನೀಡಿದ್ದು, ನೋಂದಣಿ ಪ್ರಕ್ರಿಯೆ ಅತ್ಯಂತ ವೇಗವಾಗಿ ಸಾಗುತ್ತಿದ್ದು ಈಗಾಗಲೇ ಶೇ.70.6ರಷ್ಟು ನೌಕರರು ಯಶಸ್ವಿಯಾಗಿ ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದೆ.



ಮಾಧ್ಯಮಗಳಲ್ಲಿ ಪ್ರಕಟವಾದ 2,13,925 ನೌಕರರ ಅಪೂರ್ಣ ನೋಂದಣಿಯ ಅಂಕಿ-ಅಂಶಗಳು ಜೂನ್ 12ರ ಮಾಹಿತಿಯಾಗಿದ್ದು, ಕಳೆದ ನಾಲ್ಕೈದು ದಿನಗಳಲ್ಲಿ ನಡೆಸಲಾದ ವಿಶೇಷ ನೋಂದಣಿ ಅಭಿಯಾನದ ಪರಿಣಾಮ ಜೂನ್ 18ರ ವೇಳೆಗೆ ಈ ಸಂಖ್ಯೆ 1,40,433ಕ್ಕೆ ಇಳಿಕೆಯಾಗಿದೆ. ಅಂದರೆ ಕೇವಲ ಒಂದು ವಾರದಲ್ಲೇ ನೋಂದಣಿಯಾಗದ ನೌಕರರ ಸಂಖ್ಯೆಯಲ್ಲಿ ಶೇ.34.4ರಷ್ಟು ಇಳಿಕೆ ಕಂಡುಬಂದಿದೆ ಎಂದು ಸರ್ಕಾರ ತಿಳಿಸಿದೆ.

**ಪಾರದರ್ಶಕ ಆಡಳಿತಕ್ಕೆ 'ಕರ್ತವ್ಯ' ಹೆಜ್ಜೆ**

"'ಕರ್ತವ್ಯ' ತಂತ್ರಾಂಶವು ಸರ್ಕಾರಿ ನೌಕರರ ಹಾಜರಾತಿ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಜವಾಬ್ದಾರಿ ಮತ್ತು ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮಹತ್ವದ ಹೆಜ್ಜೆಯಾಗಿದೆ. ಶೀಘ್ರದಲ್ಲೇ ಶೇ.100ರಷ್ಟು ನೋಂದಣಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ." ಎಂದು ರಾಜ್ಯ ಸರ್ಕಾರ ತಿಳಿಸಿದೆ.

ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ (ಊಖಒಖ) ದತ್ತಾಂಶದ ಪ್ರಕಾರ, 43 ಪ್ರಮುಖ ಇಲಾಖೆಗಳು ಹಾಗೂ 137 ಸರಣಿ ಇಲಾಖೆಗಳು ಮತ್ತು ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಒಟ್ಟು 4,78,181 ನೌಕರರ ಪೈಕಿ 3,37,748 ನೌಕರರು ಈಗಾಗಲೇ 'ಕರ್ತವ್ಯ' ಆಪ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ.

ಜೂನ್ 18ರಂದು ಬೆಳಿಗ್ಗೆ 11 ಗಂಟೆಯ ವೇಳೆಗೆ ನೋಂದಾಯಿತ ನೌಕರರಲ್ಲಿ ಸುಮಾರು ಶೇ.57ರಷ್ಟು, ಅಂದರೆ 1,92,605 ಮಂದಿ ಆಪ್ ಮೂಲಕ ತಮ್ಮ ಹಾಜರಾತಿ ದಾಖಲಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಇನ್ನೂ ನೋಂದಣಿ ಮಾಡಿಕೊಳ್ಳದಿರುವ ಶೇ.29.4ರಷ್ಟು ನೌಕರರಿಗಾಗಿ ಇ-ಆಡಳಿತ ಕೇಂದ್ರ (ಅಜಉ) ವಿಶೇಷ ತರಬೇತಿ ಮತ್ತು ನೋಂದಣಿ ಶಿಬಿರಗಳನ್ನು ಆಯೋಜಿಸಿದೆ. ತಾಂತ್ರಿಕ ಸಮಸ್ಯೆಗಳ ಪರಿಹಾರಕ್ಕಾಗಿ ನೋಡಲ್ ಅಧಿಕಾರಿಗಳು, ಸಹಾಯವಾಣಿ ಹಾಗೂ ಕೃತಕ ಬುದ್ಧಿಮತ್ತೆ (ಂಖ) ಆಧಾರಿತ ವಾಯ್ಸ್ ಬಾಟ್ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ನೌಕರರು ನಿಗದಿತ ಅವಧಿಯೊಳಗೆ ಶೇ.100ರಷ್ಟು ನೋಂದಣಿ ಪೂರ್ಣಗೊಳಿಸುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಇಲಾಖಾ ಮುಖ್ಯಸ್ಥರಿಗೆ ನಿರ್ದೇಶನ ನೀಡಿದ್ದಾರೆ.

# ಇಂದು ಬೀಚಿ ಬಳಗದ ಮಾಸಿಕ ಸಾಹಿತ್ಯ ಸಭೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬೀಚಿ ಬಳಗದ ಮಾಸಿಕ ಸಾಹಿತ್ಯ ಸಭೆಯು ಜೂನ್ 20ರಂದು ಶನಿವಾರ ಸಂಜೆ 4.30ಕ್ಕೆ ಹಿರೇಮಠ ಸಭಾಭವನದಲ್ಲಿ ನಡೆಯಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸಲಿದ್ದು, ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಆಗಮಿಸಲಿರುವ ನಿವೃತ್ತ ಮುಖ್ಯ ಶಿಕ್ಷಕ ಗಂಗಾಧರಗೌಡ ಗೌಡರ ಅವರು "ಕನ್ನಡ ಭಾಷೆಯ ಮಹತ್ವ" ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಮತ್ತೋರ್ವ ನಿವೃತ್ತ ಮುಖ್ಯ ಶಿಕ್ಷಕ ಗುರುಬಸಪ್ಪ ಎಫ್. ಹೆರಕಲ್ ಅವರು "ಕನ್ನಡ ನಾಡಿಗೆ ಶ್ರೀಕೃಷ್ಣದೇವರಾಯರ ಕೊಡುಗೆ" ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಸಾಹಿತ್ಯಾಸಕ್ತರು, ಕನ್ನಡಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಬೀಚಿ ಬಳಗದ ಸಂಚಾಲಕ ಜಿ.ಎ. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಹಲವು ಬಡಾವಣೆಗಳಲ್ಲಿ ವಿದ್ಯುತ್ ವ್ಯತ್ಯಯ

▶▶ಮೊದಲನೇ ಪುಟದಿಂದ

ವಿವೇಕಾನಂದ ನಗರ, ಹೊಸ ಬಸ್ ನಿಲ್ದಾಣ, ಪಂಚಾಕ್ಷರಿ ನಗರ, ರಾಜೀವ್ ಗಾಂಧಿ ನಗರ, ಬುರುಬುರೆ ಪ್ಲಾಟ್, ಹಮಾಲರ ಪ್ಲಾಟ್, ಆನಂದಾಶ್ರಮ ರಸ್ತೆ, ಜೆ.ಟಿ. ಕಾಲೇಜು ರಸ್ತೆ, ಕೆಎಚ್‌ಬಿ–1 ಹಾಗೂ ಕೆಎಚ್‌ಬಿ–2 ಬಡಾವಣೆಗಳ ನಿವಾಸಿಗಳು ವಿದ್ಯುತ್ ವ್ಯತ್ಯಯವನ್ನು ಎದುರಿಸಲಿದ್ದಾರೆ.

ನಿರ್ವಹಣಾ ಕಾಮಗಾರಿ ಪೂರ್ಣಗೊಂಡ ಬಳಿಕ ವಿದ್ಯುತ್ ಸರಬರಾಜು ಯಥಾಸ್ಥಿತಿಗೆ ಬರಲಿದ್ದು, ಗ್ರಾಹಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಹೆಸ್ಕಾಂ ಅಧಿಕಾರಿಗಳು ಮನವಿ ಮಾಡಿದ್ದಾರೆ.

### ಕೋಮು ಸೌಹಾರ್ದದ ಹಬ್ಬಕ್ಕೆ ಗ್ರಾಮ ಸಜ್ಜು– ಭಕ್ತಿ, ಭಾವನೆ ಮತ್ತು ಭ್ರಾತೃತ್ವದ ಸಂಗಮಕ್ಕೆ ಕ್ಷಣಗಣನೆ

# ಮಾರನಬಸರಿಗೆ ಮೊಹರಂ ಸಂಭ್ರಮದ ಸಿಂಗಾರ

■ವಿಜಯಸಾಕ್ಷಿ ಸುದ್ದಿ, ರೋಣ

ಗದಗ ಜಿಲ್ಲೆಯ ಕೋಮು ಸೌಹಾರ್ದದ ಪ್ರತೀಕವಾಗಿ ಗುರುತಿಸಿಕೊಂಡಿರುವ ಮಾರನಬಸರಿ ಗ್ರಾಮ ಮತ್ತೊಮ್ಮೆ ಮೊಹರಂ ಹಬ್ಬದ ಸಂಭ್ರಮದಲ್ಲಿ ಮಿಂದೇಳಲು ಸಜ್ಜಾಗಿದೆ. ಐತಿಹಾಸಿಕ ಹಿನ್ನಲೆಯುಳ್ಳ ಮೊಹರಂ ಹಬ್ಬಕ್ಕೆ ದಿನಗಣನೆ ಆರಂಭವಾಗುತ್ತಿದ್ದಂತೆಯೇ ಇಡೀ ಗ್ರಾಮವೇ ಹಬ್ಬದ ಮೆರಗು ತಾಳಿದ್ದು, ಭಕ್ತಿ, ಭಾವನೆ ಹಾಗೂ ಭ್ರಾತೃತ್ವದ ವಾತಾವರಣ ಎಲ್ಲೆಡೆ ಆವರಿಸಿದೆ.

ವರ್ಷದ ಇತರೆ ದಿನಗಳಿಗಿಂತ ಮೊಹರಂ ಹಬ್ಬದ ದಿನಗಳಲ್ಲಿ ಮಾರನಬಸರಿ ಸಂಪೂರ್ಣ ಭಿನ್ನವಾಗಿ ಕಾಣಿಸುತ್ತದೆ. ಹಬ್ಬದ ಆಗಮನದ ಸುಳಿವು ಸಿಗುತ್ತಿದ್ದಂತೆಯೇ ಗ್ರಾಮಸ್ಥರು ತಮ್ಮ ಮನೆಗಳ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಕೊಳ್ಳುತ್ತಾರೆ.

ಮನೆಗಳಿಗೆ ಸುಣ್ಣ–ಬಣ್ಣ ಬಳಿದು ಹೊಸ ರೂಪ ನೀಡುತ್ತಾರೆ.

ಬೀದಿಗಳು ಶುಚಿಯಾಗುತ್ತವೆ. ದ್ವಾರ ಬಾಗಿಲುಗಳು ಹೊಸ ಕಳೆ ತಾಳುತ್ತವೆ.

ಗ್ರಾಮವೇ ಹಬ್ಬವನ್ನು ಬರಮಾಡಿಕೊಳ್ಳಲು ಸಿಂಗಾರಗೊಳ್ಳುತ್ತದೆ.

ಜೂನ್ 22ರಿಂದ ಆರಂಭವಾಗಲಿರುವ ಮೊಹರಂ ಹಬ್ಬ ಜೂನ್ 26ರವರೆಗೆ ನಡೆಯಲಿದ್ದು, ಈಗಾಗಲೇ ಎರಡು ಮಸೀದಿಗಳಲ್ಲೂ ಅಲಂಕಾರ ಕಾರ್ಯ ಭರದಿಂದ ಸಾಗುತ್ತಿದೆ. ಸ್ವಾಗತ ಕಮಾನುಗಳ ನಿರ್ಮಾಣ, ದ್ವಾರ ಬಾಗಿಲುಗಳ ಸಿಂಗಾರ, ಬಣ್ಣಬಣ್ಣದ ವಿದ್ಯುತ್ ದೀಪಗಳ ಅಳವಡಿಕೆ ಸೇರಿದಂತೆ ವಿವಿಧ ಸಿದ್ಧತೆಗಳು ಅಂತಿಮ ಹಂತ ತಲುಪಿವೆ. ಹಗಲು ಹೊತ್ತಿನಲ್ಲೇ ಕಂಗೊಳಿಸುವ ಗ್ರಾಮ, ರಾತ್ರಿ ವೇಳೆ ಬೆಳಕಿನ ಲೋಕವಾಗಿ ಮಾರ್ಪಡಲಿದ್ದು, ಭಕ್ತರ ಕಣ್ಮನ ಸೆಳೆಯಲಿದೆ.

ಮಾರನಬಸರಿ ಮೊಹರಂ ಹಬ್ಬದ ವಿಶೇಷತೆ ಎಂದರೆ ಅದು ಕೇವಲ ಒಂದು ಸಮುದಾಯದ ಹಬ್ಬವಾಗಿ ಉಳಿದಿಲ್ಲ.

ಸರ್ವ ಧರ್ಮ, ಸರ್ವ ಜನಾಂಗದವರು ಒಂದಾಗಿ ಆಚರಿಸುವ ಭಾವೈಕ್ಯದ ಹಬ್ಬವಾಗಿ ರೂಪುಗೊಂಡಿದೆ. ಅಲ್ಲೈ ದೇವರ ಮೇಲೆ ಅಪಾರ ಭಕ್ತಿ ಹೊಂದಿರುವ ಸಾವಿರಾರು ಭಕ್ತರು ಸುತ್ತಮುತ್ತಲಿನ ಗ್ರಾಮಗಳಿಂದ ಮಾತ್ರವಲ್ಲದೆ ರಾಜ್ಯದ ವಿವಿಧ ಭಾಗಗಳಿಂದಲೂ ಆಗಮಿಸಿ ಸಕ್ಕರೆ ನೈವೇದ್ಯ ಅರ್ಪಿಸಿ ತಮ್ಮ ಇಷ್ಟಾರ್ಥಗಳ ಸಿದ್ಧಿಗಾಗಿ ಪ್ರಾರ್ಥಿಸುತ್ತಾರೆ.

ಮೊಹರಂ ಹಬ್ಬ ಸಮೀಪಿಸುತ್ತಿದ್ದಂತೆ ಗ್ರಾಮದಲ್ಲಿ ಉತ್ಸಾಹ ಇಮ್ಮಡಿಯಾಗಿದ್ದು, ಮಕ್ಕಳು, ಯುವಕರು, ಹಿರಿಯರು ಹಬ್ಬದ ಸಿದ್ಧತೆಯಲ್ಲಿ ಕೈಜೋಡಿಸಿದ್ದಾರೆ. ಹಬ್ಬದ ಆಯೋಜನಾ ಸಮಿತಿಗಳು ಭಕ್ತರಿಗೆ ಅಗತ್ಯ ಸೌಲಭ್ಯ ಕಲ್ಪಿಸಲು ಶ್ರಮಿಸುತ್ತಿವೆ. ಎಲ್ಲೆಡೆ ಹಬ್ಬದ ಮಾತು, ಹಬ್ಬದ ಸಡಗರ, ಹಬ್ಬದ ನಿರೀಕ್ಷೆಯೇ ಕಾಣಿಸುತ್ತಿದೆ.

ಐತಿಹಾಸಿಕ ಪರಂಪರೆ, ಧಾರ್ಮಿಕ ನಂಬಿಕೆ ಹಾಗೂ ಕೋಮು ಸೌಹಾರ್ದದ ಮೌಲ್ಯಗಳನ್ನು ಒಗ್ಗೂಡಿಸಿಕೊಂಡಿರುವ ಮಾರನಬಸರಿಯ ಮೊಹರಂ ಹಬ್ಬ ಮತ್ತೊಮ್ಮೆ ಸಾವಿರಾರು ಭಕ್ತರನ್ನು ತನ್ನತ್ತ ಸೆಳೆಯಲು ಸಜ್ಜಾಗಿದ್ದು, ಗ್ರಾಮ ಈಗಾಗಲೇ ಭಕ್ತಿ ಸಾಗರದಲ್ಲಿ ತೇಲತೊಡಗಿದೆ.

**ಮಾರನಬಸರಿ ಮೊಹರಂ ವಿಶೇಷತೆ**

ಗದಗ ಜಿಲ್ಲೆಯಲ್ಲಿ ಅತ್ಯಂತ ವೈಭವದಿಂದ ಆಚರಿಸುವ ಮೊಹರಂ ಹಬ್ಬ


ಸರ್ವ ಧರ್ಮೀಯರು ಒಂದಾಗಿ ಆಚರಿಸುವ ಕೋಮು ಸೌಹಾರ್ದದ ಸಂಕೇತ

ಅಲ್ಲೈ ದೇವರ ದರ್ಶನಕ್ಕೆ ಸಾವಿರಾರು ಭಕ್ತರ ಆಗಮನ

ಸಕ್ಕರೆ ನೈವೇದ್ಯ ಸಮರ್ಪಿಸಿ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥನೆ

ಜೂನ್ 22ರಿಂದ 26ರವರೆಗೆ ಐದು ದಿನಗಳ ಸಂಭ್ರಮ

ಗ್ರಾಮವೇ ಬೆಳಕಿನ ಅಲಂಕಾರದಿಂದ ಕಂಗೊಳಿಸುವ ವಿಶೇಷತೆ




> "ಮೊಹರಂ ಹಬ್ಬವು ಕೇವಲ ಧಾರ್ಮಿಕ ಆಚರಣೆಯಲ್ಲ; ಅದು ಮಾರನಬಸರಿಯ ಭಾವೈಕ್ಯತೆ, ಭ್ರಾತೃತ್ವ ಮತ್ತು ಸೌಹಾರ್ದದ ಜೀವಂತ ಸಂಕೇತವಾಗಿದೆ. ಹಬ್ಬದ ಸಿದ್ಧತೆಯಲ್ಲಿ ಇಡೀ ಗ್ರಾಮ ಒಂದಾಗಿ ತೊಡಗಿಕೊಳ್ಳುವುದು ನಮ್ಮ ಹೆಮ್ಮೆ."
> **– ಗ್ರಾಮದ ಹಿರಿಯರು**

### ಪುನರ್‌ರಚನೆಯಾದ ಗ್ರಾಮ ಪಂಚಾಯಿತಿಗಳಿಗೆ ಸ್ಥಾನ ಹಂಚಿಕೆ ನಿಗದಿ ಸಲಹೆ–ಆಕ್ಷೇಪಣೆ ಆಧರಿಸಿ ಅಂತಿಮ ಅಧಿಸೂಚನೆ

# ಪಂಚಾಯಿತಿ ಅಖಾಡಕ್ಕೆ ಮೀಸಲಾತಿಯ ಮುನ್ನುಡಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಗ್ರಾಮ ಪಂಚಾಯಿತಿ ವ್ಯಾಪ್ತಿ ಬದಲಾವಣೆಯ ಹಿನ್ನೆಲೆಯಲ್ಲಿ ಪುನರ್‌ರಚನೆಗೊಂಡಿರುವ ಚಾಕಲಬ್ಬಿ ಹಾಗೂ ರೊಟ್ಟಿಗವಾಡ ಗ್ರಾಮ ಪಂಚಾಯಿತಿಗಳ ಕ್ಷೇತ್ರವಾರು ಸ್ಥಾನಗಳು ಮತ್ತು ಮೀಸಲಾತಿ ವಿವರಗಳನ್ನು ಪ್ರಕಟಿಸಲಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಸಲಹೆಗಳನ್ನು ಆಹ್ವಾನಿಸಲಾಗಿದೆ.



ಪುನರ್‌ರಚನೆಯಾದ ಚಾಕಲಬ್ಬಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 9 ಸ್ಥಾನಗಳಿದ್ದು, ಚಾಕಲಬ್ಬಿ–1 ಕ್ಷೇತ್ರಕ್ಕೆ ಅನುಸೂಚಿತ ಜಾತಿ ಮಹಿಳೆ, ಹಿಂದುಳಿದ ವರ್ಗ 'ಅ', ಸಾಮಾನ್ಯ ತಲಾ ಒಂದು ಸ್ಥಾನ ಹಾಗೂ ಚಾಕಲಬ್ಬಿ–2 ಕ್ಷೇತ್ರಕ್ಕೆ ಅನುಸೂಚಿತ ಪಂಗಡ ಮಹಿಳೆ, ಸಾಮಾನ್ಯ ಮಹಿಳೆ ಮತ್ತು ಸಾಮಾನ್ಯ ತಲಾ ಒಂದು ಸ್ಥಾನ ಮೀಸಲಿರಿಸಲಾಗಿದೆ. ಹೊಸಳ್ಳಿ ಕ್ಷೇತ್ರಕ್ಕೆ ಹಿಂದುಳಿದ ವರ್ಗ 'ಅ' ಮಹಿಳೆ, ಸಾಮಾನ್ಯ ಮಹಿಳೆ ಹಾಗೂ ಸಾಮಾನ್ಯ ತಲಾ ಒಂದು ಸ್ಥಾನ ನಿಗದಿಪಡಿಸಲಾಗಿದೆ.

ಇದೇ ರೀತಿ, ರೊಟ್ಟಿಗವಾಡ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 10 ಸ್ಥಾನಗಳಿದ್ದು, ರೊಟ್ಟಿಗವಾಡ–1 ಕ್ಷೇತ್ರಕ್ಕೆ ಹಿಂದುಳಿದ ವರ್ಗ 'ಅ' ಮಹಿಳೆ, ಹಿಂದುಳಿದ ವರ್ಗ 'ಬ', ಸಾಮಾನ್ಯ ಮಹಿಳೆ ಹಾಗೂ ಸಾಮಾನ್ಯ ತಲಾ ಒಂದು ಸ್ಥಾನ ಮೀಸಲಿರಿಸಲಾಗಿದೆ. ರೊಟ್ಟಿಗವಾಡ–2 ಕ್ಷೇತ್ರಕ್ಕೆ ಅನುಸೂಚಿತ ಜಾತಿ ಮಹಿಳೆ, ಹಿಂದುಳಿದ ವರ್ಗ 'ಅ' ಮಹಿಳೆ ಹಾಗೂ ಸಾಮಾನ್ಯ ಒಂದು ಸ್ಥಾನ ಮೀಸಲಾಗಿದೆ. ಕೊಂಕಣಕುರಹಟ್ಟಿ ಕ್ಷೇತ್ರಕ್ಕೆ ಅನುಸೂಚಿತ ಪಂಗಡ ಮಹಿಳೆ ಹಾಗೂ ಸಾಮಾನ್ಯ ವರ್ಗಕ್ಕೆ ಎರಡು ಸ್ಥಾನಗಳನ್ನು ನಿಗದಿಪಡಿಸಲಾಗಿದೆ.

ಧಾರವಾಡ ತಾಲೂಕಿನ ಗುಳೇದಕೊಪ್ಪ, ತೇಗೂರ ಹಾಗೂ ಕುಂದಗೋಳ ತಾಲೂಕಿನ ಬರದ್ವಾಡ, ಚಾಕಲಬ್ಬಿ ಮತ್ತು ರೊಟ್ಟಿಗವಾಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರು ಈ ಕುರಿತು ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳಿದ್ದಲ್ಲಿ ಜೂನ್ 25ರ ಸಂಜೆ 5 ಗಂಟೆಯೊಳಗೆ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಗೆ ಖುದ್ದಾಗಿ ಸಲ್ಲಿಸಬಹುದಾಗಿದೆ.

ನಿಗದಿತ ಅವಧಿಯ ನಂತರ ಸಲ್ಲಿಕೆಯಾಗುವ ಆಕ್ಷೇಪಣೆ ಮತ್ತು ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ. ಸ್ವೀಕೃತ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಅಧಿಸೂಚನೆ ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗುಪ್ತ ಮತದಾನದ ಮೂಲಕ ವಿದ್ಯಾರ್ಥಿ ನಾಯಕರ ಆಯ್ಕೆ

# ಕೆಎಲ್‌ಇ ಶಾಲೆಯಲ್ಲಿ ಶಾಲಾ ಸಂಸತ್ ರಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳು, ನಾಯಕತ್ವ ಗುಣಗಳು ಹಾಗೂ ಚುನಾವಣೆ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ನಗರದ ಕೆಎಲ್‌ಇ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ವರ್ಷದ ಶಾಲಾ ಸಂಸತ್ ರಚನೆ ಮಾಡಲಾಯಿತು.



ಶಾಲಾ ಆಡಳಿತ ವ್ಯವಸ್ಥೆ ಹಾಗೂ ಸರ್ಕಾರಿ ಆಡಳಿತದ ಕಾರ್ಯವೈಖರಿಯನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವ ಹಿತದೃಷ್ಟಿಯಿಂದ ಆಯೋಜಿಸಲಾದ ಈ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳು ತಾಂತ್ರಿಕ ಮತದಾನದ ಮೂಲಕ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡಿದರು. ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಚುನಾವಣೆಗಳ ಮಾದರಿಯಲ್ಲಿಯೇ ಗುಪ್ತ ಮತದಾನ ಪದ್ಧತಿ ಅನುಸರಿಸಿ ವಿವಿಧ ಹುದ್ದೆಗಳಿಗೆ ಅರ್ಹ ಮತ್ತು ಸಮರ್ಥ ವಿದ್ಯಾರ್ಥಿ ನಾಯಕರನ್ನು ಆಯ್ಕೆ ಮಾಡಲಾಯಿತು.

ಶಾಲಾ ಪ್ರಧಾನಿಯಾಗಿ ಧೃತಿ ಪಿ. ವಾರಕರ್ ಹಾಗೂ ಉಪ ಪ್ರಧಾನಿಯಾಗಿ ಬಸವರಾಜ ಎಂ. ಗೊಳಗೊಳಕಿ ಆಯ್ಕೆಯಾದರು. ಕ್ರೀಡಾ ಮಂತ್ರಿಯಾಗಿ ಕಾರ್ತಿಕ ಲಮಾಣಿ, ಉಪ ಮಂತ್ರಿಯಾಗಿ ಕಿರಣ್ ತುಪ್ಪದ, ಶಿಸ್ತು ವಿಭಾಗದ ಮಂತ್ರಿಯಾಗಿ ಮನೋಜ ಮೆಣಸಗಿ, ಉಪ ಮಂತ್ರಿಯಾಗಿ ತನ್ವಿ ಚೆನ್ನಳ್ಳಿ ಆಯ್ಕೆಯಾದರು.

ಸಾಂಸ್ಕೃತಿಕ ಮಂತ್ರಿಯಾಗಿ ಚಿನ್ಮಯಿ ಹಿರೇಮಠ, ಉಪ ಮಂತ್ರಿಯಾಗಿ ಅನ್ವಿ ಭೂಸ್ತ ಆಯ್ಕೆಯಾಗಿದ್ದು, ನೀಲಿ ಪಡೆಯ ನಾಯಕಿಯಾಗಿ ಪ್ರತೀಕ್ಷಾ ಪಾಟೀಲ ಹಾಗೂ ಉಪ ನಾಯಕಿಯಾಗಿ ವಿರಾಲಿ ಬನ್ಸಾಲಿ, ಹಸಿರು ಪಡೆಯ ನಾಯಕಿಯಾಗಿ ಪೂರ್ವಿ ರಾಮನಕೊಪ್ಪ ಹಾಗೂ ಉಪ ನಾಯಕಿಯಾಗಿ ಸೇಜಲ್ ಮೇರವಾಡೆ ಆಯ್ಕೆಯಾದರು.

ಕೆಂಪು ಪಡೆಯ ನಾಯಕನಾಗಿ ಸುಭಾಷ್ ಹಾದಿ, ಉಪ ನಾಯಕಿಯಾಗಿ ಹಾರ್ದಿಕಾ ಬೆಳವಡಿ, ಹಳದಿ ಪಡೆಯ ನಾಯಕಿಯಾಗಿ ದಿವಿಜಾ ಹೊಸೂರ ಹಾಗೂ ಉಪ ನಾಯಕನಾಗಿ ಅಭಿನವ್ ಕುಂಬಾರ ಆಯ್ಕೆಯಾಗಿದ್ದಾರೆ.

ಕಿರಿಯರ ವಿಭಾಗದಲ್ಲಿ ಬಾಲಕರ ಪ್ರಧಾನಿಯಾಗಿ ಸಿದ್ಧಾರ್ಥ್ ಕಬಾಡರ ಹಾಗೂ ಬಾಲಕಿಯರ ಪ್ರಧಾನಿಯಾಗಿ ಪ್ರಾರ್ಥನಾ ಕೊಪ್ಪದ ಆಯ್ಕೆಯಾಗಿದ್ದಾರೆ.

ಆಯ್ಕೆಯಾದ ಶಾಲಾ ಸಂಸತ್ತಿನ ಎಲ್ಲಾ ಸದಸ್ಯರನ್ನು ಸಂಸ್ಥೆಯ ಕಾರ್ಯಾಧ್ಯಕ್ಷರು, ಆಡಳಿತ ಮಂಡಳಿಯ ನಿರ್ದೇಶಕರು, ಶಾಲೆಯ ಪ್ರಾಂಶುಪಾಲರು, ಸಂಯೋಜಕರು ಹಾಗೂ ಶಿಕ್ಷಕ ವೃಂದ ಅಭಿನಂದಿಸಿ ಶುಭ ಹಾರೈಸಿದರು.

> "ಶಾಲಾ ಸಂಸತ್ ಚುನಾವಣೆ ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಮಹತ್ವದ ವೇದಿಕೆಯಾಗಿದೆ. ಇಂತಹ ಪ್ರಕ್ರಿಯೆಗಳು ಭವಿಷ್ಯದ ಉತ್ತಮ ನಾಗರಿಕರನ್ನು ರೂಪಿಸುತ್ತವೆ."
> **–ಶಾಲಾ ಆಡಳಿತ ಮಂಡಳಿ**

# ನಾಳೆ ನೀಟ್ ಪರೀಕ್ಷೆ; 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ

■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಎನ್‌ಟಿಎ) ವತಿಯಿಂದ ಜೂನ್ 21ರಂದು ನಡೆಯಲಿರುವ ನೀಟ್ (ಯುಜಿ)–2026 ಪರೀಕ್ಷೆಯ ಹಿನ್ನೆಲೆಯಲ್ಲಿ ಜಿಲ್ಲೆಯ ಐದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಮಧ್ಯಾಹ್ನ 2ರಿಂದ ಸಂಜೆ 5 ಗಂಟೆಯವರೆಗೆ ನಡೆಯಲಿರುವ ಪರೀಕ್ಷೆಯಲ್ಲಿ ನಕಲು, ಅಕ್ರಮ ಹಾಗೂ ಶಾಂತಿ ಭಂಗದಂತಹ ಘಟನೆಗಳನ್ನು ತಡೆಗಟ್ಟುವ ಉದ್ದೇಶದಿಂದ ಜೂನ್ 21ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಯಲ್ಲಿರಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಬಂಧಕಾಜ್ಞೆ ಜಾರಿಯ ಅವಧಿಯಲ್ಲಿ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಹೊರತುಪಡಿಸಿ ಇತರರಿಗೆ ಪರೀಕ್ಷಾ ಕೇಂದ್ರದೊಳಗೆ ಪ್ರವೇಶ ಇರುವುದಿಲ್ಲ. ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ನಡೆಸುವುದು ಹಾಗೂ ಗುಂಪುಗಳ ಪ್ರವೇಶವನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿರುವ ಝೆರಾಕ್ಸ್ ಅಂಗಡಿಗಳು, ಬುಕ್‌ಸ್ಟಾಲ್‌ಗಳು ಹಾಗೂ ಫೋಟೋ ಕಾಪಿಯರ್ ಕೇಂದ್ರಗಳನ್ನು ಬಂದ್ ಮಾಡುವಂತೆ ಆದೇಶಿಸಲಾಗಿದೆ. ಪರೀಕ್ಷಾ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನೂ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಮಾಧ್ಯಮ ಪ್ರತಿನಿಧಿಗಳಿಗೆ ಪರೀಕ್ಷಾರ್ಥಿಗಳು ಕೇಂದ್ರಗಳಿಗೆ ಆಗಮಿಸುವ ಹಾಗೂ ನಿರ್ಗಮಿಸುವ ಸಮಯದಲ್ಲಿ ಮಾತ್ರ ಚಿತ್ರೀಕರಣಕ್ಕೆ ಅವಕಾಶ ನೀಡಲಾಗಿದ್ದು, ಪರೀಕ್ಷಾ ಕೊಠಡಿಗಳ ಒಳಗೆ ಪ್ರವೇಶ ಹಾಗೂ ಚಿತ್ರೀಕರಣವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಮೊಬೈಲ್ ಫೋನ್ ಸೇರಿದಂತೆ ಯಾವುದೇ ಸಂಪರ್ಕ ಸಾಧನಗಳು ಹಾಗೂ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ನಿಷೇಧಿಸಿರುವ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ಕೊಂಡೊಯ್ಯುವುದನ್ನು ನಿರ್ಬಂಧಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಎಂಆರ್‌ಪಿ ಮೀರಿದ ದರ, ನ್ಯಾನೋ ಯೂರಿಯಾ ಕಡ್ಡಾಯ ಖರೀದಿ ಆರೋಪ–ಕರುನಾಡ ವಿಜಯಸೇನೆಯಿಂದ ಅಧಿಕಾರಿಗಳಿಗೆ ಮನವಿ

# ಗೊಬ್ಬರಕ್ಕಾಗಿ ರೈತರ ಗೋಳಾಟ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಬಿತ್ತನೆ ಹಂಗಾಮಿನ ಸಂದರ್ಭದಲ್ಲಿ ತಾಲೂಕಿನ ಕೆಲವು ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ರೈತರಿಂದ ಸರ್ಕಾರ ನಿಗದಿಪಡಿಸಿರುವ ಗರಿಷ್ಠ ಚಿಲ್ಲರೆ ಬೆಲೆ (ಎಂಆರ್‌ಪಿ)ಗಿಂತ ಹೆಚ್ಚಿನ ದರ ವಸೂಲಿ ಮಾಡಲಾಗುತ್ತಿದೆ. ಅಲ್ಲದೆ ಯೂರಿಯಾ ಖರೀದಿಸುವ ರೈತರಿಗೆ ನ್ಯಾನೋ ಯೂರಿಯಾ ಬಾಟಲಿಯನ್ನು ಕಡ್ಡಾಯವಾಗಿ ಖರೀದಿಸುವಂತೆ ಒತ್ತಾಯಿಸಲಾಗುತ್ತಿದ್ದು, ಇದರಿಂದ ರೈತರು ಹೆಚ್ಚುವರಿ ಆರ್ಥಿಕ ಹೊರೆ ಎದುರಿಸುವಂತಾಗಿದೆ ಎಂದು ಕರುನಾಡ ವಿಜಯಸೇನೆ ಆರೋಪಿಸಿದೆ.

ಈ ಕುರಿತು ತಾಲೂಕು ಕೃಷಿ ಅಧಿಕಾರಿ ಎಸ್.ವಿ. ಪಾಟೀಲ್ ಅವರಿಗೆ ಮನವಿ ಸಲ್ಲಿಸಿದ ಕರುನಾಡ ವಿಜಯಸೇನೆ ತಾಲೂಕು ಅಧ್ಯಕ್ಷ ಪ್ರಕಾಶ್ ಆರ್. (ವಕೀಲರು) ಮಾತನಾಡಿ, ತಾಲೂಕಿನ ರೈತರು ಎದುರಿಸುತ್ತಿರುವ ಗೊಬ್ಬರ ವಿತರಣೆಯ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.



ತಾಲೂಕಿನ ಕೆಲವು ರಸಗೊಬ್ಬರ ಮಾರಾಟ ಕೇಂದ್ರಗಳಲ್ಲಿ ಎಂಆರ್‌ಪಿ ದರ ಉಲ್ಲಂಘಿಸಿ ಹೆಚ್ಚುವರಿ ಹಣ ವಸೂಲಿ ಮಾಡಲಾಗುತ್ತಿದೆ. ಯೂರಿಯಾ ಖರೀದಿಸಲು ತೆರಳುವ ರೈತರಿಗೆ ನ್ಯಾನೋ ಯೂರಿಯಾ ಬಾಟಲ್‌ನ್ನು ಕಡ್ಡಾಯವಾಗಿ ಜೋಡಣೆ ಮಾಡಿ ಮಾರಾಟ ಮಾಡುತ್ತಿರುವುದು ರೈತರ ಮೇಲಿನ ಅನ್ಯಾಯವಾಗಿದೆ ಎಂದು ಅವರು ದೂರಿದರು.

ಇದರ ಜೊತೆಗೆ, ಗೊಬ್ಬರ ಖರೀದಿ ವೇಳೆ ಎಫ್‌ಐಡಿ (FID) ವ್ಯವಸ್ಥೆಯನ್ನು ಕಡ್ಡಾಯಗೊಳಿಸಿರುವುದರಿಂದ ಹಾಗೂ ತಾಂತ್ರಿಕ ದೋಷಗಳ ಕಾರಣದಿಂದ ಗ್ರಾಮೀಣ ಭಾಗದ ಸಾಮಾನ್ಯ ಮತ್ತು ಅವಿದ್ಯಾವಂತ ರೈತರು ಗೊಬ್ಬರ ಪಡೆಯಲು ಪರದಾಡುವಂತಾಗಿದೆ. ಸರ್ವರ್ ಸಮಸ್ಯೆ, ತಾಂತ್ರಿಕ ಅಡಚಣೆ ಮತ್ತು ದಾಖಲೆ ಪರಿಶೀಲನೆಯ ವಿಳಂಬದಿಂದ ರೈತರು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ತಾಲೂಕಿನ ಎಲ್ಲಾ ರಸಗೊಬ್ಬರ ಮಳಿಗೆಗಳ ಮೇಲೆ ವಿಶೇಷ ಪರಿಶೀಲನೆ ನಡೆಸಬೇಕು. ಎಂಆರ್‌ಪಿ ಮೀರಿದ ದರ ವಸೂಲಿ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ನ್ಯಾನೋ ಯೂರಿಯಾ ಕಡ್ಡಾಯ ಮಾರಾಟವನ್ನು ತಕ್ಷಣ ನಿಲ್ಲಿಸಬೇಕು. ಎಫ್‌ಐಡಿ ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಿ ರೈತರಿಗೆ ಸುಲಭವಾಗಿ ಗೊಬ್ಬರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಕರುನಾಡ ವಿಜಯಸೇನೆ ಆಗ್ರಹಿಸಿದೆ.

ಮನವಿ ಸ್ವೀಕರಿಸಿದ ತಾಲೂಕು ಕೃಷಿ ಅಧಿಕಾರಿ ಎಸ್.ವಿ. ಪಾಟೀಲ್, ರೈತರ ಸಮಸ್ಯೆಗಳನ್ನು ಇಲಾಖೆಯ ಗಮನಕ್ಕೆ ತಂದಿರುವುದು ಸ್ವಾಗತಾರ್ಹ. ತಾಲೂಕಿನ ಯಾವುದೇ ಗೊಬ್ಬರ ಅಂಗಡಿಯಲ್ಲಿ ಎಂಆರ್‌ಪಿ ಗಿಂತ ಹೆಚ್ಚಿನ ದರ ವಸೂಲಿ ಮಾಡುತ್ತಿರುವುದು ಕಂಡುಬಂದರೆ ಅಂತಹವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಅಧಿಕಾರಿ ನಾಗಾರ್ಜುನ, ಉಪಾಧ್ಯಕ್ಷ ಹಿಟ್ನಾಳ್ ವಿಶ್ವನಾಥ್, ಪೂಜಾರಿ ಬಸವರಾಜ್, ಗುರುನಾಯ್ಕ, ಖಜಾಂಚಿ ಶಿವಕುಮಾರ್ ಎಂ., ಜಂಟಿ ಕಾರ್ಯದರ್ಶಿಗಳಾದ ಗಾಳೆಪ್ಪ, ಪ್ರಕಾಶ್ ಕಿತ್ತನೂರು, ದೊಡ್ಡಬಸಪ್ಪ, ವಿದ್ಯಾರ್ಥಿ ಘಟಕದ ಉಪಾಧ್ಯಕ್ಷ ಗುರುಸ್ವಾಮಿ ಎಂ., ಯುವ ಘಟಕದ ಕಾರ್ಯಾಧ್ಯಕ್ಷ ಸ್ವಾಮಿ ಹೆಚ್. ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ರೈತರು ಗೊಬ್ಬರಕ್ಕಾಗಿ ಅಂಗಡಿಗಳಿಗೆ ಹೋದಾಗ ಹೆಚ್ಚುವರಿ ಹಣ ವಸೂಲಿ ಮಾಡುವುದು ಹಾಗೂ ನ್ಯಾನೋ ಯೂರಿಯಾವನ್ನು ಕಡ್ಡಾಯವಾಗಿ ಖರೀದಿಸಲು ಒತ್ತಾಯಿಸುವುದು ಸರಿಯಲ್ಲ. ರೈತರ ಹಿತಾಸಕ್ತಿಗೆ ಧಕ್ಕೆ ತರುವ ಇಂತಹ ಕ್ರಮಗಳಿಗೆ ತಕ್ಷಣ ಕಡಿವಾಣ ಹಾಕಬೇಕು. ಇಲ್ಲವಾದರೆ ರೈತರ ಪರವಾಗಿ ಉಗ್ರ ಹೋರಾಟ ನಡೆಸಲಾಗುವುದು."
> **– ಪ್ರಕಾಶ್ ಆರ್.**, ತಾಲೂಕು ಅಧ್ಯಕ್ಷರು, ಕರುನಾಡ ವಿಜಯಸೇನೆ

### ಕಪ್ಪೆ ಮದುವೆ, ನೀರೆರಚುವ ಹಬ್ಬದ ಮೂಲಕ ಉತ್ತಮ ಮಳೆಯ ಪ್ರಾರ್ಥನೆ

# ಮಳೆಗಾಗಿ ಕಪ್ಪೆಗಳ ಕಲ್ಯಾಣೋತ್ಸವ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರು ಮಳೆ ಕೈಕೊಟ್ಟು ಬಿತ್ತನೆಯಾದ ಬೆಳೆಗಳು ಒಣಗುವ ಆತಂಕ ಎದುರಾಗಿರುವ ಹಿನ್ನೆಲೆಯಲ್ಲಿ ಪಟ್ಟಣದ ಕದರಗೇರಿ ಓಣಿಯ ನಾಗರಿಕರು ವರುಣ ದೇವನ ಕೃಪೆಗಾಗಿ ಸಾಂಪ್ರದಾಯಿಕವಾಗಿ ಕಪ್ಪೆ ಮದುವೆ ಹಾಗೂ ನೀರೆರಚುವ ಹಬ್ಬ ಆಚರಿಸಿ ಮಳೆಯಿಗಾಗಿ ಪ್ರಾರ್ಥಿಸಿದರು.

ಮೇ ಅಂತ್ಯ ಹಾಗೂ ಜೂನ್ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ಬೆಳೆಗಳಿಗೆ ಇದೀಗ ಮಳೆಯ ಅಗತ್ಯತೆ ಇದ್ದರೂ ಕಳೆದ ಎಂಟು ದಿನಗಳಿಂದ ಮಳೆಯ ಸುಳಿವಿಲ್ಲದೆ ಬಿರು ಬಿಸಿಲು ಮುಂದುವರಿದಿದೆ. ಇದರಿಂದ ಮೊಳಕೆಯೊಡೆದ ಬೆಳೆಗಳು ಬಾಡುವ ಭೀತಿ ಎದುರಾಗಿದ್ದು, ರೈತ ಸಮುದಾಯ ಆತಂಕಕ್ಕೆ ಒಳಗಾಗಿದೆ.

ಈ ಹಿನ್ನೆಲೆಯಲ್ಲಿ ಗುರುವಾರ ಕದರಗೇರಿ ಓಣಿಯ ದೇವಸ್ಥಾನದ ಆವರಣದಲ್ಲಿ ಸಂಪ್ರದಾಯಬದ್ಧವಾಗಿ ಕಪ್ಪೆಗಳ ಮದುವೆ ನೆರವೇರಿಸಲಾಯಿತು. ದೇವಸ್ಥಾನವನ್ನು ರಂಗೋಲಿ, ತಳಿ–ತೋರಣಗಳಿಂದ ಅಲಂಕರಿಸಲಾಗಿದ್ದು, ನೂರಾರು ಭಕ್ತರು ಕಪ್ಪೆಗಳಿಗೆ ಅಕ್ಷತೆ ಹಾಕಿ ಉತ್ತಮ ಮಳೆಯಾಗಲೆಂದು ಪ್ರಾರ್ಥಿಸಿದರು.



ವಿಶೇಷವಾಗಿ ಪುಟ್ಟ ಮಕ್ಕಳಿಬ್ಬರನ್ನು ಮದುಮಕ್ಕಳ ವೇಷದಲ್ಲಿ ಸಿಂಗರಿಸಿ ಅರಿಶಿನ ಶಾಸ್ತ್ರ, ಮದುವೆ ಶಾಸ್ತ್ರ ಸೇರಿದಂತೆ ವಿವಿಧ ಸಾಂಪ್ರದಾಯಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬಳಿಕ ಮಹಿಳೆಯರು, ಪುರುಷರು ಹಾಗೂ ಮಕ್ಕಳು ಪರಸ್ಪರ ನೀರೆರಚಿಕೊಂಡು ಸಂಭ್ರಮಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕಪ್ಪೆಗಳಿಗೆ ಮದುವೆ ಮಾಡಿದರೆ ವರುಣ ದೇವ ಪ್ರಸನ್ನನಾಗಿ ಮಳೆ ಸುರಿಸುತ್ತಾನೆ ಎಂಬ ಜನನಂಬಿಕೆ ಇಂದಿಗೂ ಜೀವಂತವಾಗಿದ್ದು, ಮಳೆ ಕೊರತೆಯ ಸಂದರ್ಭಗಳಲ್ಲಿ ಕಪ್ಪೆ ಅಥವಾ ಕತ್ತೆಗಳ ಮದುವೆ, ಗುರ್ಜಿ ಆಟ, ಭಜನೆ ಮೊದಲಾದ ಆಚರಣೆಗಳನ್ನು ನಡೆಸುವ ಸಂಪ್ರದಾಯ ಮುಂದುವರಿದಿದೆ. ಕಾರ್ಯಕ್ರಮದ ಬಳಿಕ ಸಿದ್ಧಪಡಿಸಿದ್ದ ಸಂಗಟಿ–ಸಾರು ಸೇರಿದಂತೆ ಸಾಂಪ್ರದಾಯಿಕ ಊಟವನ್ನು ಎಲ್ಲರೂ ಸವಿದರು.

ಈ ಸಂದರ್ಭದಲ್ಲಿ ಲಕ್ಷ್ಮವ್ವ ಗಿಡಿಬಿಡಿ, ದೀಪಾ ಗಿಡಿಬಿಡಿ, ರೇವತಿ ಉಪನಾಳ, ವಾಣಿ ಹತ್ತಿ, ನಿಂಗವ್ವ ಟೋಕಾಳಿ, ಗದಿಗೆವ್ವ ಟೋಕಾಳಿ, ಮಂಜವ್ವ ಗಿಡಿಬಿಡಿ, ಬಸಮ್ಮ ಗಿಡಿಬಿಡಿ, ಗಂಗಮ್ಮ ಗಡೆಪ್ಪನವರ, ಸಾವಿತ್ರಿ ಗಡೆಪ್ಪನವರ, ಶಾಂತಾ ಡಂಬಳ, ಅನ್ನಪೂರ್ಣ ಲಿಂಗಶೆಟ್ಟಿ, ಲಕ್ಷ್ಮವ್ವ ಹುರಕನವರ, ರೇಣುಕಾ ಅಡರಕಟ್ಟಿ, ನೀಲಪ್ಪ ಹತ್ತಿ, ಸೋಮೇಶ ಉಪನಾಳ, ಮಹಾದೇವಪ್ಪ ಗಿಡಿಬಿಡಿ, ಮಂಜುನಾಥ ಲಿಂಗಶೆಟ್ಟಿ, ಸೋಮಣ್ಣ ಚಂದರಗಿ, ಅಜ್ಜಪ್ಪ ಬಡಿಗೇರ, ಗಂಗಾಧರ ಶಿರಿಗಣ್ಣವರ, ಶಿವಪ್ಪ ಗಿಡಿಬಿಡಿ ಸೇರಿದಂತೆ ಮಹಿಳೆಯರು, ಮಕ್ಕಳು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

> ಮಳೆ ಕೊರತೆಯಿಂದ ರೈತರು ಆತಂಕದಲ್ಲಿದ್ದಾರೆ. ವರುಣ ದೇವರ ಕೃಪೆಯಿಂದ ಉತ್ತಮ ಮಳೆಯಾಗಿ ಬೆಳೆಗಳು ಉಳಿಯಲಿ ಎಂಬ ನಂಬಿಕೆಯಿಂದ ಕಪ್ಪೆ ಮದುವೆ ಮತ್ತು ನೀರೆರಚುವ ಹಬ್ಬ ಆಚರಿಸಿದ್ದೇವೆ."
>
> –ಸ್ಥಳೀಯರು.

## ಜೂ. 22ರಂದು ಒಂದು ದಿನದ ಉದ್ಯಮಶೀಲತಾ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರ ಸಹಯೋಗದಲ್ಲಿ ಸ್ವಂತ ಉದ್ಯೋಗ ಆರಂಭಿಸಲು ಆಸಕ್ತಿ ಹೊಂದಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪುರುಷ ಮತ್ತು ಮಹಿಳೆಯರಿಗಾಗಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಆಯೋಜಿಸಲಾಗಿದೆ.

ಶಿಬಿರವು ಜೂನ್ 22ರಂದು ನಗರದ ಮಹೇಶ್ವರಿ ವಿವಿಧೋದ್ದೇಶ ಮಹಿಳಾ ಮಂಡಳದಲ್ಲಿ ನಡೆಯಲಿದ್ದು, ಉದ್ಯಮ ಆರಂಭಿಸುವ ಕುರಿತು ಅಗತ್ಯ ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಆಡಳಿತ ಭವನ, ರೂಂ ಸಂಖ್ಯೆ 106 ಅಥವಾ ದೂರವಾಣಿ ಸಂಖ್ಯೆ 7795855847 ಹಾಗೂ 8722759959 ಸಂಪರ್ಕಿಸಬಹುದು ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊರಾರ್ಜಿ ದೇಸಾಯಿ ಶಾಲೆಗೆ ವಿದ್ಯಾರ್ಥಿ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ ಆಂಗ್ಲ ಮಾಧ್ಯಮ ಶಾಲೆಯ 5ನೇ ತರಗತಿ ವಿದ್ಯಾರ್ಥಿ ವಿಜಯ ಫಕ್ಕೀರೇಶ ಕಾಡಣ್ಣವರ 2026ನೇ ಸಾಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರವೇಶ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ್ದಾನೆ. ಬಸಾಪೂರ ಗ್ರಾಮದ ವಿದ್ಯಾರ್ಥಿಯಾಗಿರುವ ವಿಜಯ, ರಾಜ್ಯ ಮಟ್ಟದಲ್ಲಿ 100ನೇ ರ್‍ಯಾಂಕ್ ಹಾಗೂ ಗದಗ ಜಿಲ್ಲೆಯಲ್ಲಿ 2ನೇ ರ್‍ಯಾಂಕ್ ಗಳಿಸಿ ತಾಲೂಕಿನ ಗೊಜನೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಆಯ್ಕೆಯಾಗಿದ್ದಾನೆ.

ವಿದ್ಯಾರ್ಥಿಯ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಶಿಕ್ಷಕರು ಹಾಗೂ ಪೋಷಕರು ಹರ್ಷ ವ್ಯಕ್ತಪಡಿಸಿದ್ದು, ಅಭಿನಂದನೆ ಸಲ್ಲಿಸಿದ್ದಾರೆ.

## ಸಾಹಿತಿ ಡಾ. ಹಿರೇಮಠರಿಗೆ 'ಮಾನ್ವಿತಾ ಸಾಹಿತ್ಯ ರತ್ನ' ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಖ್ಯಾತ ಸಾಹಿತಿ, ಚಿಂತಕ ಹಾಗೂ ಸಮಾಜಸೇವಕರಾದ ಡಾ. ವಿ.ವಿ. ಹಿರೇಮಠ ಅವರಿಗೆ ಪ್ರತಿಷ್ಠಿತ 'ಮಾನ್ವಿತಾ ಸಾಹಿತ್ಯ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ನಗರದ ಪಂಜುರ್ಲಿ ಹೋಟೆಲ್ ಸಭಾಭವನದಲ್ಲಿ ಶ್ರೀ ಆರ್ಯ ದುರ್ಗಾದೇವಿ ಪ್ರಕಾಶನ ಹಾಗೂ ಮಾನ್ವಿತಾ ಸ್ಟುಡಿಯೋ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 'ಮಾನ್ವಿತಾ ಕಲೋತ್ಸವ' ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಸಮ್ಮೇಳನದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಗತಿಪರ ಸಾಹಿತಿ ಹಾಗೂ ಚಿಂತಕರಾಗಿರುವ ಡಾ. ವಿ.ವಿ. ಹಿರೇಮಠ ಅವರು ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ್ದು, ಸಾಹಿತ್ಯ ಮತ್ತು ಸಮಾಜಮುಖಿ ಚಟುವಟಿಕೆಗಳ ಮೂಲಕ ಗುರುತಿಸಿಕೊಂಡಿದ್ದಾರೆ. ಅವರ ಸಾಧನೆಯನ್ನು ಪರಿಗಣಿಸಿ 'ಮಾನ್ವಿತಾ ಸಾಹಿತ್ಯ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.



> "ಸಾಹಿತ್ಯವು ಸಮಾಜದ ದಿಕ್ಕು ತೋರಿಸುವ ದೀಪವಾಗಬೇಕು. ಸಮಾಜಮುಖಿ ಚಿಂತನೆಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವುದು ಸಾಹಿತ್ಯದ ಪ್ರಮುಖ ಉದ್ದೇಶವಾಗಿದೆ."
>
> **– ಡಾ. ವಿ.ವಿ. ಹಿರೇಮಠ, ಸಾಹಿತಿ**

ಡಾ. ಹಿರೇಮಠ ಅವರು ಕನ್ನಡದಲ್ಲಿ 200ಕ್ಕೂ ಅಧಿಕ ಕವನ ಸಂಕಲನಗಳು, ಸಾಹಿತ್ಯ ಕೃತಿಗಳು, ಸಂಪಾದಿತ ಹಾಗೂ ವಿಮರ್ಶಾತ್ಮಕ ಕೃತಿಗಳನ್ನು ರಚಿಸಿದ್ದಾರೆ. ಅಲ್ಲದೆ 20ಕ್ಕೂ ಹೆಚ್ಚು ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಪತ್ರಿಕೆಗಳಲ್ಲಿ ವಿವಿಧ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಸಾಹಿತ್ಯ ವಿಷಯಗಳ ಕುರಿತು ಲೇಖನಗಳನ್ನು ಪ್ರಕಟಿಸಿದ್ದಾರೆ.

ಸಾಹಿತ್ಯ ಕ್ಷೇತ್ರದ ಸೇವೆಗಾಗಿ ಅನೇಕ ಅಂತಾರಾಷ್ಟ್ರೀಯ, ರಾಷ್ಟ್ರೀಯ ಹಾಗೂ ರಾಜ್ಯಮಟ್ಟದ ಪ್ರಶಸ್ತಿಗಳನ್ನು ಪಡೆದಿರುವ ಅವರು, ಸಮಾಜಸೇವೆಯಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಬಡ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ಸೇರಿದಂತೆ ವಿವಿಧ ಸಾಮಾಜಿಕ ಸೇವಾ ಕಾರ್ಯಗಳ ಮೂಲಕ ಜನಮನ್ನಣೆ ಗಳಿಸಿದ್ದಾರೆ.

### ಅನಸೂಯಾ ಕೊಗಳಿ ನಿವೃತ್ತಿ ಸಮಾರಂಭದಲ್ಲಿ ಮಹಾಂತೇಶ ಮಲ್ಲನಗೌಡ್ರ ಅಭಿಮತ

## ಮಕ್ಕಳ ಮನದಲ್ಲಿ ಉಳಿಯುವ ಶಿಕ್ಷಕರೇ ನಿಜವಾದ ಸಾಧಕರು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶಿಕ್ಷಕ ವೃತ್ತಿಯು ಎಲ್ಲ ವೃತ್ತಿಗಳಿಗಿಂತಲೂ ಅತ್ಯಂತ ಪವಿತ್ರವಾದುದು. ನಿಷ್ಠೆ ಮತ್ತು ಸಮರ್ಪಣಾ ಭಾವದಿಂದ ಕರ್ತವ್ಯ ನಿರ್ವಹಿಸುವ ಶಿಕ್ಷಕರು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಸದಾ ಅಜರಾಮರರಾಗಿ ಉಳಿಯುತ್ತಾರೆ ಎಂದು ಕೊಪ್ಪಳದ ಸಾಹಿತಿ ಹಾಗೂ ನಿವೃತ್ತ ಪ್ರಾಚಾರ್ಯ ಮಹಾಂತೇಶ ಮಲ್ಲನಗೌಡ್ರ ಹೇಳಿದರು.

ಪಟ್ಟಣದ ಶ್ರೀ ವೀರಪ್ಪಜ್ಜನವರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕಿ ಅನಸೂಯಾ ಕೊಗಳಿ ಅವರ ನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು. ಮನುಷ್ಯ ಜೀವನದಲ್ಲಿ ಪುಣ್ಯದ ಕಾರ್ಯ ಮಾಡಿದವರೇ ಶಿಕ್ಷಕರಾಗುತ್ತಾರೆ. ಲಾಭ–ನಷ್ಟಗಳ ಲೆಕ್ಕಾಚಾರಕ್ಕಿಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕೆಲಸಕ್ಕೆ ಮಹತ್ವ ನೀಡುವ ಶಿಕ್ಷಕರು ಸಮಾಜದಲ್ಲಿ ಅತ್ಯಂತ ಗೌರವಕ್ಕೆ ಪಾತ್ರರಾಗುತ್ತಾರೆ. ಅಂತಹ ಪೂಜ್ಯನೀಯ ಸೇವೆಯನ್ನು ಅನಸೂಯಾ ಕೊಗಳಿಯವರು ಮೂರು ದಶಕಗಳ ಕಾಲ ಸಲ್ಲಿಸಿ ನಿವೃತ್ತರಾಗಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.



> "ಶಿಕ್ಷಕರು ಗಳಿಸುವ ದೊಡ್ಡ ಪ್ರಶಸ್ತಿ ಎಂದರೆ ವಿದ್ಯಾರ್ಥಿಗಳ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆಯುವುದು. ಅಂತಹ ಗೌರವವನ್ನು ಅನಸೂಯಾ ಕೊಗಳಿಯವರು ತಮ್ಮ ಸೇವಾ ಅವಧಿಯಲ್ಲಿ ಸಂಪಾದಿಸಿದ್ದಾರೆ."
>
> **–ಮಹಾಂತೇಶ ಮಲ್ಲನಗೌಡ್ರ, ಸಾಹಿತಿ ಹಾಗೂ ನಿವೃತ್ತ ಪ್ರಾಚಾರ್ಯ**

ಗಣ್ಯ ವರ್ತಕ ಮುತ್ತಣ್ಣ ಪಲ್ಲೇದ ಮಾತನಾಡಿ, ಅನಸೂಯಾ ಕೊಗಳಿಯವರು ತಮ್ಮ ಸರಳತೆ, ಶಿಸ್ತು ಮತ್ತು ಸಮರ್ಪಣಾ ಮನೋಭಾವದಿಂದ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಅಚ್ಚಳಿಯದ ಸ್ಥಾನ ಪಡೆದಿದ್ದಾರೆ. ಆದರ್ಶ ಶಿಕ್ಷಕಿಯಾಗಿ ಅವರು ಸಲ್ಲಿಸಿದ ಸೇವೆ ಸದಾ ಸ್ಮರಣೀಯವಾಗಿರಲಿದೆ ಎಂದರು.

ಉದ್ದಿಮೆದಾರ ಬಸವರಾಜ ವಂಕಲಕುಂಟಿ ಮಾತನಾಡಿ, ಗಟ್ಟಿಯಾದ ತಳಪಾಯವಿದ್ದಾಗ ಮಾತ್ರ ಕಟ್ಟಡ ಸುಭದ್ರವಾಗಿರುವಂತೆ, ಮಕ್ಕಳಿಗೆ ಬಾಲ್ಯದಲ್ಲಿಯೇ ಉತ್ತಮ ಸಂಸ್ಕಾರ ಮತ್ತು ಶಿಕ್ಷಣ ನೀಡಿದಾಗ ಉತ್ತಮ ನಾಗರಿಕರು ರೂಪುಗೊಳ್ಳುತ್ತಾರೆ. ಮಲ್ಲಾಪುರ ಗ್ರಾಮದ ಜಿ.ಎಲ್.ಪಿ.ಎಸ್. ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸಿದ ಅನಸೂಯಾ ಮೇಡಂ ಇಂತಹ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಿದ್ದಾರೆ ಎಂದು ಶ್ಲಾಘಿಸಿದರು.ಸಭೆಯನ್ನುದ್ದೇಶಿಸಿ ನಿವೃತ್ತ ಉಪನ್ಯಾಸಕ ಎ.ಟಿ. ಕಲ್ಮಠ, ನಿವೃತ್ತ ಶಿಕ್ಷಕ ಬಿ.ಬಿ. ಮಲ್ಲನಗೌಡ್ರ, ಶಂಕ್ರಪ್ಪ ಕೊಗಳಿ ಮಾತನಾಡಿದರು. ವೇದಿಕೆಯಲ್ಲಿ ಡಾ. ಎಂ.ಸಿ. ಚಪ್ಪಣ್ಣಮಠ, ಮಲ್ಲಿಕಾರ್ಜುನಗೌಡ ಮಲ್ಲನಗೌಡ್ರ, ಶಿವಪುತ್ರಪ್ಪ ಕಡೆತೋಟದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಅನಸೂಯಾ ಕೊಗಳಿ ಹಾಗೂ ಅವರ ಪತಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

### ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್‌ನಿಂದ ಉಚಿತ ಅಧ್ಯಯನ ಕೇಂದ್ರ ಆರಂಭಕ್ಕೆ ಸಿದ್ಧತೆ

## ಗ್ರಾಮೀಣ ಪ್ರತಿಭೆಗಳಿಗೆ ಹೊಸ ವೇದಿಕೆ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್ ವತಿಯಿಂದ ವಿದ್ಯಾರ್ಥಿಗಳು ಹಾಗೂ ಉದ್ಯೋಗ ಆಕಾಂಕ್ಷಿಗಳಿಗಾಗಿ ಉಚಿತ ಅಧ್ಯಯನ ಕೇಂದ್ರವನ್ನು ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಸಂಸ್ಥೆಯ ಮುಖ್ಯಸ್ಥೆ ಶಂಷಾದ್ ಬೇಗಂ ತಿಳಿಸಿದರು.

ಪಟ್ಟಣದ ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್ ಕಚೇರಿಯಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬರುವ ಭಾನುವಾರದಿಂದ ಅಧ್ಯಯನ ಕೇಂದ್ರ ಆರಂಭಿಸುವ ಯೋಜನೆ ಹೊಂದಿದ್ದು, ಐಎಎಸ್, ಐಪಿಎಸ್, ಕೆಎಎಸ್, ಕೆಪಿಎಸ್, ಪಿಡಿಒ, ಪೊಲೀಸ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಗತ್ಯವಾದ ಪುಸ್ತಕಗಳು ಮತ್ತು ಅಧ್ಯಯನ ಸಾಮಗ್ರಿಗಳನ್ನು ಒದಗಿಸಲಾಗುವುದು ಎಂದರು.

ವಿದ್ಯಾರ್ಥಿಗಳ ಉಜ್ವಲ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಅಧ್ಯಯನ ಕೇಂದ್ರವನ್ನು ಆರಂಭಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ತರಬೇತಿ ಕೇಂದ್ರ (ಕೋಚಿಂಗ್ ಸೆಂಟರ್) ಆರಂಭಿಸುವ ಉದ್ದೇಶವೂ ಇದೆ ಎಂದು ತಿಳಿಸಿದರು.




> "ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಗೆ ಅನುಕೂಲವಾಗುವಂತೆ ಉಚಿತ ಅಧ್ಯಯನ ಕೇಂದ್ರ ಆರಂಭಿಸಲಾಗುತ್ತಿದೆ.
>
> ಮುಂದಿನ ದಿನಗಳಲ್ಲಿ ತರಬೇತಿ ಕೇಂದ್ರವೂ ಆರಂಭಿಸುವ ಗುರಿ ಹೊಂದಿದ್ದೇವೆ."
>
> **–ಶಂಷಾದ್ ಬೇಗಂ, ಮುಖ್ಯಸ್ಥೆ, ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್**

ಸಂಸ್ಥೆಯ ನಿರ್ದೇಶಕ ಬಾಬು ಮಾತನಾಡಿ, ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್‌ಗೆ ಒಂದು ವರ್ಷ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಆಗಸ್ಟ್ 25ರಂದು ಪಟ್ಟಣದ ಗ್ರಾಮೀಣ ಬ್ಯಾಂಕ್ ಎದುರಿನ ನೂತನ ಕಟ್ಟಡದಲ್ಲಿ ಡ್ರೀಮ್ ಇಂಡಿಯಾ ಸೂಪರ್ ಮಾರ್ಕೆಟ್ ಆರಂಭಿಸಲಾಗುವುದು ಎಂದು ಹೇಳಿದರು.

ಮಹಿಳಾ ಸಬಲೀಕರಣ, ಬ್ಯಾಂಕಿಂಗ್ ಹಾಗೂ ಇತರೆ ಸಾಮಾಜಿಕ–ಆರ್ಥಿಕ ಚಟುವಟಿಕೆಗಳನ್ನೂ ಸಂಸ್ಥೆ ಕೈಗೊಳ್ಳಲಿದೆ ಎಂದರು.

ಸಂಸ್ಥೆಯ ಸಿಬ್ಬಂದಿ ಮದನ್ ಕುಮಾರ್ ಮಾತನಾಡಿ, ಕಳೆದ ಒಂದು ವರ್ಷದಲ್ಲಿ ಸಂಸ್ಥೆ 1.25 ಕೋಟಿ ರೂ. ಮೌಲ್ಯದ ಬಹುಮಾನಗಳನ್ನು ಗ್ರಾಹಕರಿಗೆ ವಿತರಿಸಿದ್ದು, ಬಂಗಾರ, ಬುಲೆಟ್ ಬೈಕ್, ಕಾರು ಹಾಗೂ ಟ್ರ್ಯಾಕ್ಟರ್ ಸೇರಿದಂತೆ ಹಲವು ಬಹುಮಾನಗಳನ್ನು ನೀಡಲಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಉದ್ಯೋಗಿಗಳಾದ ಅಶ್ವಿನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಲಕ್ಷಾಂತರ ರೂ. ಮೌಲ್ಯದ ಗಾಂಜಾ ಜಪ್ತಿ – ಐವರು ಆರೋಪಿಗಳ ಬಂಧನ

## ಗಾಂಜಾ ಜಾಲಕ್ಕೆ ಲಕ್ಷ್ಮೇಶ್ವರ ಪೊಲೀಸರ ಬ್ರೇಕ್!



**■ವಿಜಯಸಾಕ್ಷಿ ಸುದ್ದಿ, ಗದಗ**

ಮಾದಕ ವಸ್ತುಗಳ ವಿರುದ್ಧ ಸಮರ ಸಾರಿರುವ ಜಿಲ್ಲೆಯ ಲಕ್ಷ್ಮೇಶ್ವರ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ, ಲಕ್ಷಾಂತರ ರೂ. ಮೌಲ್ಯದ 2.365 ಕೆಜಿ ಗಾಂಜಾವನ್ನು ಜಪ್ತಿ ಮಾಡಿ ಐವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದೇವಸ್ಥಾನವೊಂದರ ಬಳಿ ಗಾಂಜಾ ಸೇವಿಸುತ್ತಿದ್ದ ಇಬ್ಬರನ್ನು ಬಂಧಿಸಿದ ಪ್ರಕರಣದ ತನಿಖೆ ಮುಂದುವರಿದಂತೆ ಗದಗ–ಬೆಟಗೇರಿ ಮೂಲದ ಮತ್ತೊಂದು ಗಾಂಜಾ ಪೂರೈಕೆ ಜಾಲ ಬೆಳಕಿಗೆ ಬಂದಿದ್ದು, ಪೊಲೀಸರು ಜಾಲವನ್ನು ಭೇದಿಸಿದ್ದಾರೆ. ಜೂನ್ 15ರಂದು ಲಕ್ಷ್ಮೇಶ್ವರ ನಗರದ ಮುಕ್ತಿನಗರದ ಅಗಸ್ತ್ಯತೀರ್ಥ ದೇವಸ್ಥಾನದ ಸಮೀಪ ಗಾಂಜಾ ಸೇವನೆ ನಡೆಸುತ್ತಿದ್ದ ಆರೋಪಿಗಳಾದ ಸಂತೋಷ ಬಸವರಾಜ ಉಪ್ಪಾರ ಹಾಗೂ ಸಾದಿಕ್ ರಿಯಾಜ್ ಅಹ್ಮದ್ ರಿತ್ತಿ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಈ ಸಂಬಂಧ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಎನ್‌ಡಿಪಿಎಸ್ ಕಾಯ್ದೆ 1985ರ ಕಲಂ 27(ಬಿ) ಅಡಿ ಪ್ರಕರಣ ದಾಖಲಿಸಲಾಗಿತ್ತು.

ಪ್ರಕರಣದ ತನಿಖೆಯನ್ನು ಚುರುಕುಗೊಳಿಸಿದ ಪೊಲೀಸರು, ಬಂಧಿತರಿಂದ ದೊರೆತ ಮಾಹಿತಿಯ ಆಧಾರದ ಮೇಲೆ ಜೂನ್ 18ರಂದು ಗದಗದಿಂದ ಲಕ್ಷ್ಮೇಶ್ವರಕ್ಕೆ ಗಾಂಜಾ ಸಾಗಣೆ ಮಾಡುತ್ತಿದ್ದ ಮೂವರು ಆರೋಪಿಗಳ ಮೇಲೆ ದಾಳಿ ನಡೆಸಿದರು. ಈ ವೇಳೆ ನಾಗರಾಜ ದೊಡ್ಡಪ್ಪ ಮುತಗಾರ, ಪ್ರಶಾಂತ ಕರಿಯಪ್ಪ ಕುಟಗೇರಿ ಹಾಗೂ ಗಂಗಪ್ಪ ಬಾಬು ನಾರಾಯಣ ಚವ್ಹಾಣ ಎಂಬ ಆರೋಪಿಗಳನ್ನು ಬಂಧಿಸಿ, ಅವರ ವಶದಲ್ಲಿದ್ದ 2.365 ಕೆಜಿ ಗಾಂಜಾ ವಶಪಡಿಸಿಕೊಂಡರು. ಪೊಲೀಸರು ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯ ಕಲಂ 20(ಬಿ) ಅಡಿ ಹೆಚ್ಚುವರಿ ಆರೋಪಗಳನ್ನು ಸೇರಿಸಿದ್ದು, ಬಂಧಿತರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಈ ಯಶಸ್ವಿ ಕಾರ್ಯಾಚರಣೆಯನ್ನು ಪಿಎಸ್‌ಐ ಟಿ.ಕೆ. ರಾಠೋಡ್ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ನಡೆಸಿದ್ದು, ತನಿಖಾಧಿಕಾರಿಯಾಗಿ ಪಿಎಸ್‌ಐ ನಾಗರಾಜ ಗಡದ ಕಾರ್ಯನಿರ್ವಹಿಸಿದ್ದಾರೆ. ಪ್ರಕರಣ ಭೇದಿಸಲು ಮಾರ್ಗದರ್ಶನ ನೀಡಿದ ಗದಗ ಉಪವಿಭಾಗದ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಶಿರಹಟ್ಟಿ ಸಿಪಿಐ ಬಿ.ವಿ. ನ್ಯಾಮಗೌಡ ಅವರ ಕಾರ್ಯವೈಖರಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಶ್ಲಾಘಿಸಿದ್ದಾರೆ.

### ಗ್ರಾಹಕರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಲು ಹೆಸ್ಕಾಂ ಕ್ರಮ

## ಇಂದು ವಿದ್ಯುತ್ ಅದಾಲತ್

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನಗರ ಹಾಗೂ ಗ್ರಾಮೀಣ ಭಾಗಗಳ ವಿದ್ಯುತ್ ಗ್ರಾಹಕರ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುವ ಉದ್ದೇಶದಿಂದ ಜೂನ್ 20ರಂದು ವಿದ್ಯುತ್ ಅದಾಲತ್ ಆಯೋಜಿಸಲಾಗಿದೆ.

ಸರ್ಕಾರದ ನಿರ್ದೇಶನದಂತೆ ಪ್ರತಿ ತಿಂಗಳ ಮೂರನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರ ವ್ಯಾಪ್ತಿಯ ಗದಗ ಶಹರ, ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸಲಾಗುತ್ತದೆ. ಈ ತಿಂಗಳ ಮೂರನೇ ಶನಿವಾರ ರಜೆ ಇರುವ ಹಿನ್ನೆಲೆಯಲ್ಲಿ ಜೂನ್ 20ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲು ನಿರ್ಧರಿಸಲಾಗಿದೆ. ಗದಗ ಶಹರ ಉಪವಿಭಾಗದಲ್ಲಿ ಕಾರ್ಯ ಮತ್ತು ಪಾಲನೆ ವೃತ್ತ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಅಧೀಕ್ಷಕ ಎಂಜಿನಿಯರ್ ಅವರ ಅಧ್ಯಕ್ಷತೆಯಲ್ಲಿ ಅದಾಲತ್ ನಡೆಯಲಿದೆ.

ವಿದ್ಯುತ್ ಸಂಪರ್ಕ, ಬಿಲ್ಲಿಂಗ್, ಕಡಿಮೆ ವೋಲ್ಟೇಜ್, ವಿದ್ಯುತ್ ಕಂಬ, ತಂತಿ, ಟ್ರಾನ್ಸ್‌ಫಾರ್ಮರ್ ಹಾಗೂ ಇತರೆ ವಿದ್ಯುತ್ ಸಂಬಂಧಿತ ಸಮಸ್ಯೆಗಳ ಕುರಿತು ಸಾರ್ವಜನಿಕರು ತಮ್ಮ ಅಹವಾಲುಗಳನ್ನು ನೇರವಾಗಿ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಪಡೆಯಬಹುದಾಗಿದೆ.

ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಹೆಸ್ಕಾಂ ಪ್ರಕಟಣೆಯಲ್ಲಿ ಕೋರಿದೆ.

## ಎನ್‌ಡಬ್ಲ್ಯೂಕೆಆರ್‌ಟಿಸಿ ಅಂತಿಮ ಆಯ್ಕೆ ಪಟ್ಟಿ ಪ್ರಕಟ

**■ವಿಜಯಸಾಕ್ಷಿ ಸುದ್ದಿ, ಗದಗ**

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್‌ಡಬ್ಲ್ಯೂಕೆಆರ್‌ಟಿಸಿ)ಯ ಸಹಾಯಕ ಸಂಚಾರ ನಿರೀಕ್ಷಕ (ದರ್ಜೆ–3) ಮೇಲ್ವಿಚಾರಕೇತರ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ ಹಾಗೂ ಕೊನೆಯ ಅಭ್ಯರ್ಥಿ ಪಡೆದ ಕಟ್‌ಆಫ್ ಅಂಕಗಳ ವಿವರಗಳನ್ನು ಸಂಸ್ಥೆಯ ಅಧಿಕೃತ ವೆಬ್‌ಸೈಟ್ ಹಾಗೂ ಹುಬ್ಬಳ್ಳಿಯ ಕೇಂದ್ರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಅಭ್ಯರ್ಥಿಗಳು ತಮ್ಮ ವಿವರಗಳನ್ನು ಪರಿಶೀಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವೆಬ್‌ಸೈಟ್: [NWKRTC ಅಧಿಕೃತ ಜಾಲತಾಣ](https://nwkrtc.karnataka.gov.in)

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka